ಭಾನುವಾರ, 21.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 119
Digital Varthe Kannada Daily
Volume 01 - Issue 119
Sunday 21.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ವಾಲ್ಮೀಕಿ ನಿಗಮ ಹಗರಣ: ಬಿ. ನಾಗೇಂದ್ರಗೆ ಸೇರಿದ ₹8 ಕೋಟಿ ಮೌಲ್ಯದ ಸ್ಥಿರಾಸ್ತಿ ಜಪ್ತಿ



**ಬೆಂಗಳೂರು:** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಕ್ಕೆ ಸಂಬಂಧಿಸಿದ ಬಹುಕೋಟಿ ಹಣ ದುರುಪಯೋಗ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ED) ಮಹತ್ವದ ಕ್ರಮ ಕೈಗೊಂಡಿದೆ. ಈ ಪ್ರಕರಣಕ್ಕೆ ಸಂಬಂಧಿಸಿ ಮಾಜಿ ಸಚಿವ ಬಿ. ನಾಗೇಂದ್ರ ಅವರಿಗೆ ಸೇರಿದ ಸುಮಾರು 8.07 ಕೋಟಿ ರೂಪಾಯಿ ಮೌಲ್ಯದ ನಾಲ್ಕು ಸ್ಥಿರಾಸ್ತಿಗಳನ್ನು ಇಡಿ ತಾತ್ಕಾಲಿಕವಾಗಿ ಜಪ್ತಿ ಮಾಡಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (PMLA), 2002ರ ಅಡಿಯಲ್ಲಿ ಈ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಜಪ್ತಿ ಮಾಡಲಾದ ಆಸ್ತಿಗಳಲ್ಲಿ ವಸತಿ ಹಾಗೂ ವಾಣಿಜ್ಯ ಉದ್ದೇಶಕ್ಕೆ ಬಳಕೆಯಾಗುತ್ತಿರುವ ಭೂಮಿ ಮತ್ತು ಕಟ್ಟಡಗಳು ಸೇರಿವೆ ಎಂದು ಇಡಿ ಪ್ರಕಟಣೆಯಲ್ಲಿ ತಿಳಿಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ನಿಧಿಗಳನ್ನು ದುರುಪಯೋಗಪಡಿಸಿಕೊಂಡು ಕೋಟ್ಯಂತರ ರೂಪಾಯಿ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಲಾಗಿದೆ ಎಂಬ ಆರೋಪವಿದೆ. ತನಿಖೆಯ ಪ್ರಕಾರ, ನಿಗಮದ ಖಾತೆಗಳಿಂದ ದೊಡ್ಡ ಪ್ರಮಾಣದ ಹಣವನ್ನು ಮೊದಲು ನಕಲಿ ಖಾತೆಗಳಿಗೆ ವರ್ಗಾವಣೆ ಮಾಡಲಾಗಿತ್ತು.

ಬಳಿಕ ಆ ಹಣವನ್ನು ಶೆಲ್ ಕಂಪನಿಗಳು ಮತ್ತು ಮಧ್ಯವರ್ತಿ ಸಂಸ್ಥೆಗಳ ಮೂಲಕ ಇತರ ವ್ಯಕ್ತಿಗಳಿಗೆ ಸಾಗಿಸಲಾಗಿದೆ ಎನ್ನಲಾಗಿದೆ.ಇಡಿ ತನಿಖೆಯಲ್ಲಿ ಈ ಹಣ ವರ್ಗಾವಣೆ ಪ್ರಕ್ರಿಯೆ ಪೂರ್ವಯೋಜಿತ ಹಾಗೂ ಸಂಘಟಿತ ರೀತಿಯಲ್ಲಿ ನಡೆದಿರುವ ಶಂಕೆ ವ್ಯಕ್ತವಾಗಿದೆ. ಅಪರಾಧದಿಂದ ಲಭಿಸಿದ ಉಳಿದ ಆದಾಯವನ್ನು ಪತ್ತೆಹಚ್ಚಲು ಸಾಧ್ಯವಾಗಿಲ್ಲ ಎಂದು ಇಡಿ ತಿಳಿಸಿದ್ದು , ಆ ಹಣವನ್ನು ಬೇರೆ ಮಾರ್ಗಗಳಲ್ಲಿ ಮರೆಮಾಚಿರಬಹುದು ಅಥವಾ ವಿಲೇವಾರಿ ಮಾಡಿರಬಹುದು ಎಂಬ ಅನುಮಾನವನ್ನೂ ವ್ಯಕ್ತಪಡಿಸಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಪೊಲೀಸ್ ಇಲಾಖೆ ಹಾಗೂ ಸಿಬಿಐ (CBI) ಪ್ರತ್ಯೇಕ ಎಫ್‌ಐಆರ್‌ಗಳನ್ನು ದಾಖಲಿಸಿವೆ. ಈ ಎಫ್‌ಐಆರ್‌ಗಳ ಆಧಾರದಲ್ಲೇ ಇಡಿ ಹಣಕಾಸು ತನಿಖೆಯನ್ನು ಮುಂದುವರಿಸುತ್ತಿದೆ. ಇಡಿ ನೀಡಿರುವ ಮಾಹಿತಿ ಪ್ರಕಾರ, ಈ ಪ್ರಕರಣದಲ್ಲಿ ಇದುವರೆಗೆ ಒಟ್ಟು 13.01 ಕೋಟಿ ರೂಪಾಯಿ ಮೌಲ್ಯದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.


## ರಾಜಧಾನಿ ಎಕ್ಸ್‌ಪ್ರೆಸ್ ದುರಂತ: ಏಳು ಕಾಡಾನೆಗಳ ಸಾವುಸ್ಥಿರಾಸ್ತಿ ಜಪ್ತಿ



**ಅಸ್ಸಾಂ**: ಭೀಕರ ರೈಲು ಅಪಘಾತವೊಂದು ಶನಿವಾರ ಮುಂಜಾನೆ ಸಂಭವಿಸಿದ್ದು , ಕಾಡಾನೆಗಳ ಹಿಂಡಿಗೆ ರಾಜಧಾನಿ ಎಕ್ಸ್‌ಪ್ರೆಸ್ ರೈಲು ಡಿಕ್ಕಿ ಹೊಡೆದ ಪರಿಣಾಮ ಏಳು ಕಾಡಾನೆಗಳು ಸಾವನ್ನಪ್ಪಿವೆ. ಅಪಘಾತದ ತೀವ್ರತೆಯಿಂದ ರೈಲಿನ ಇಂಜಿನ್ ಸೇರಿದಂತೆ ಐದು ಬೋಗಿಗಳು ಹಳಿ ತಪ್ಪಿದ್ದು , ಆದರೆ ಅದೃಷ್ಟವಶಾತ್ ಯಾವುದೇ ಪ್ರಯಾಣಿಕರು ಅಥವಾ ರೈಲ್ವೆ ಸಿಬ್ಬಂದಿಗೆ ಯಾವುದೇ ಗಾಯಗಳಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ದುರ್ಘಟನೆ ಡಿಸೆಂಬರ್ 20ರ ಬೆಳಗಿನ ಜಾವ ಸುಮಾರು 2.17ರ ವೇಳೆಗೆ ಅಸ್ಸಾಂನ ನಾಗಾಂವ್ ಜಿಲ್ಲೆಯ ಈಶಾನ್ಯ ಗಡಿನಾಡು ರೈಲ್ವೆಯ ಲುಮ್ಡಿಂಗ್ ವಿಭಾಗದ ಜ ಮು ನಾ ಮು ಖ್ - ಕಂ ಪು ರ ಮಾರ್ಗದಲ್ಲಿ ನಡೆದಿದೆ. ನವದೆಹಲಿಗೆ ತೆರಳುತ್ತಿದ್ದ ರೈಲು ಡಿಎನ್ ಸೈರಂಗ್-ನವದೆಹಲಿ ರಾಜಧಾನಿ ಎಕ್ಸ್‌ಪ್ರೆಸ್, ಹಳಿಯಲ್ಲಿ ಇದ್ದ ಆನೆಗಳ ಹಿಂಡಿಗೆ ಡಿಕ್ಕಿ ಹೊಡೆದಿದೆ. ರೈಲ್ವೆ ಅಧಿಕಾರಿಗಳ ಮಾಹಿತಿ ಪ್ರಕಾರ, ಹಳಿಯಲ್ಲಿ ಆನೆಗಳು ಇರುವುದನ್ನು ಗಮನಿಸಿದ ಲೋಕೋ ಪೈಲಟ್ ತಕ್ಷಣವೇ ತುರ್ತು ಬ್ರೇಕ್ ಹಾಕಿದ್ದಾರೆ. ಆದರೆ ವೇಗದಲ್ಲಿದ್ದ ರೈಲನ್ನು ಸಂಪೂರ್ಣವಾಗಿ ನಿಲ್ಲಿಸಲು ಸಾಧ್ಯವಾಗದೆ ಆನೆಗಳಿಗೆ ಡಿಕ್ಕಿ ಹೊಡೆದಿದೆ. ಅಪಘಾತದ ಪರಿಣಾಮ ಸ್ಥಳದಲ್ಲೇ ಏಳು ಕಾಡಾನೆಗಳು ಸಾವನ್ನಪ್ಪಿವೆ. ಪ್ರಯಾಣಿಕರು ಸುರಕ್ಷಿತ ಈ ಅಪಘಾತ ಸಂಭವಿಸಿದ್ದರು, ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಎಲ್ಲ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ. ಯಾವುದೇ ಸಾವು ಅಥವಾ ಗಾಯಗಳ ವರದಿಯಾಗಿಲ್ಲ. ಘಟನೆ ನಡೆದ ಕೂಡಲೇ ಪ್ರಯಾಣಿಕರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದ್ದು , ಅಗತ್ಯ ಸಹಾಯ ಒದಗಿಸಲಾಗಿದೆ. ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಅಪಘಾತ ಪರಿಹಾರ ರೈಲುಗಳು ಹಾಗೂ ಲುಮ್ಡಿಂಗ್ ವಿಭಾಗೀಯ ಪ್ರಧಾನ ಕಚೇರಿಯ ಹಿರಿಯ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಧಾವಿಸಿದ್ದಾರೆ.

ಹಳಿ ತಪ್ಪಿದ ಬೋಗಿ ಗಳನ್ನು ತೆರವುಗೊಳಿಸುವುದು ಮತ್ತು ರೈಲು ಸಂಚಾರ ಪುನಃಸ್ಥಾಪಿಸುವ ಕಾರ್ಯವನ್ನು ತ್ವರಿತವಾಗಿ ಕೈಗೊಳ್ಳಲಾಗಿದೆ. ಈಶಾನ್ಯ ಗಡಿನಾಡು ರೈಲ್ವೆಯ ಜನರಲ್ ಮ್ಯಾನೇಜರ್, ಲುಮ್ಡಿಂಗ್ ವಿಭಾಗೀಯ ರೈಲ್ವೆ ಮ್ಯಾನೇಜರ್ ಸೇರಿದಂತೆ ಉನ್ನತ ಮಟ್ಟದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ರಕ್ಷಣಾ ಮತ್ತು ಪುನರ್‌ಸ್ಥಾಪನೆ ಕಾರ್ಯಗಳ ಮೇಲ್ವಿಚಾರಣೆ ನಡೆಸಿದ್ದಾರೆ.

## ಪ್ರಯಾಣಿಕನ ಮೇಲೆ ಹಲ್ಲೆ ಆರೋಪ: ಏರ್ ಇಂಡಿಯಾ ಎಕ್ಸ್‌ಪ್ರೆಸ್ ಪೈಲಟ್ ಅಮಾನತು



**ನವದೆಹಲಿ:** ದೆಹಲಿಯ ಇಂದಿ ರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್-1 ರಲ್ಲಿ ಏರ್ ಇಂಡಿಯಾ ಎಕ್ಸ್‌ಪ್ರೆಸ್ ಪೈಲಟ್ ಒಬ್ಬರು ಪ್ರಯಾಣಿಕನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಈ ಘಟನೆಯ ಬಳಿಕ ವಿಮಾನಯಾನ ಸಂಸ್ಥೆ ತಕ್ಷಣವೇ ಹಲ್ಲೆ ನಟಿಸಿದ ಪೈಲಟ್ ಅನ್ನು ಅಮಾನತುಗೊಳಿಸಿದೆ. ಪ್ರಯಾಣಿಕ ಅಂಕಿತ್ ದೇವನ್ ಎಂಬುವವರು ತಮ್ಮ ಕುಟುಂಬದೊಂದಿಗೆ (4 ತಿಂಗಳ ಶಿಶು ಮತ್ತು 7 ವರ್ಷದ ಮಗಳೊಂದಿಗೆ) ಸ್ಪೈಸ್‌ಜೆಟ್ ವಿಮಾನದಲ್ಲಿ ಪ್ರಯಾಣಿಸುತ್ತಿದ್ದರು. ವಿಮಾನ ನಿಲ್ದಾಣ ಸಿಬ್ಬಂದಿ ಅವರನ್ನ ಆದ್ಯತೆಯ ಸುರಕ್ಷತಾ ಲೇನ್ (ಸಿಬ್ಬಂದಿ ಮತ್ತು ಸಹಾಯ ಅಗತ್ಯವಿರುವ ಪ್ರಯಾಣಿಕರಿಗೆ ಮೀಸಲಾದ ಲೇನ್) ಬಳಸುವಂತೆ ಸಲಹೆ ನೀಡಿದ್ದರು. ಆದರೆ ಏರ್ ಇಂಡಿಯಾ ಎಕ್ಸ್‌ಪ್ರೆಸ್ ಕ್ಯಾಪ್ಟನ್ ವೀರೇಂದರ್ ಸೆಜ್ವಾಲ್ ಅವರು ಸಾಲಿನ ಮುಂದೆ ಬಂದು ನಿಲ್ಲಲು ಪ್ರಯತ್ನಿಸಿದ್ದಾರೆ ಎಂದು ದೇವನ್ ಆರೋಪಿಸಿದ್ದಾರೆ. ಇದಕ್ಕೆ ದೇವನ್ ಆಕ್ಷೇಪ ವ್ಯಕ್ತಪಡಿಸಿದಾಗ ವಾಗ್ವಾದ ಉಂಟಾಗಿ, ಪೈಲಟ್ ಅವರು ಅವಮಾನಕರ ಭಾಷೆ ಬಳಸಿ ನಂತರ ದೈಹಿಕವಾಗಿ ದಾಳಿ ಮಾಡಿದ್ದಾರೆ ಎಂದು ದೇವನ್ ಆರೋಪಿಸಿದ್ದಾರೆ.

ಈ ದಾಳಿಯಿಂದ ಗಾಯಗೊಂಡ ದೇವನ್ ವೈದ್ಯಕೀಯ ಸಹಾಯ ಪಡೆದಿದ್ದಾರೆ. ಘಟನೆ ಬಳಿಕ ದೇವನ್ ಅವರು ಈ ಘಟನೆಯ ವಿವರಗಳನ್ನು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಹಲ್ಲೆ ನಡೆಸಿದ ಪೈಲಟ್ ಹೆಸರು ಮತ್ತು ಭಾವಚಿತ್ರವನ್ನೂ ಬಿಡುಗಡೆ ಮಾಡಿದ್ದಾರೆ. ವಿಮಾನ ಹಾರಿಸದ ಸಮಯದಲ್ಲಿ ಇಂಡಿಗೋ ವಿಮಾನದಲ್ಲಿ ಬೆಂಗಳೂರಿಗೆ ಪ್ರಯಾಣಿಸುತ್ತಿದ್ದ ಪೈಲಟ್ ಈ ಘಟನೆಯ ಬಳಿಕವೂ ಪ್ರಯಾಣ ಮುಂದುವರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ ಘಟನೆಯ ಬಳಿಕ ದೇವನ್, ತಮಗೆ ದೂರು ದಾಖಲಿಸದಂತೆ ಒತ್ತಡ ಹೇರಿ ಒಂದು ಹೇಳಿಕೆಗೆ ಸಹಿ ಹಾಕಿಸಲಾಗಿದೆ ಎಂದು ಕೂಡ ಆರೋಪಿಸಿದ್ದಾರೆ.

ವಿಮಾನ ತಪ್ಪಿಸಿಕೊಂಡರೆ ರಜಾದಿನದ ಬುಕಿಂಗ್‌ಗಳು ವ್ಯರ್ಥಾ ಆಗುತ್ತಿದ್ದವು ಎಂಬ ಕಾರಣಕ್ಕೆ ಒತ್ತಡಕ್ಕೆ ಮಣಿದಿದ್ದೇನೆ ಎಂದು ಅವರು ಹೇಳಿದ್ದಾರೆ ಈ ಆರೋಪಗಳಿಗೆ ಪ್ರತಿಕ್ರಿಯಿಸಿದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ಸಂಸ್ಥೆ, ಘಟನೆಯ ಬಗ್ಗೆ ವಿಷಾದ ವ್ಯಕ್ತಪಡಿಸಿದೆ. ಪ್ರಯಾಣಿಕನ ಮೇಲಿನ ಹಲ್ಲೆಗೆ ಕ್ಷಮೆಯಾಚಿಸುತ್ತೇವೆ. ಇಂತಹ ಅಸಭ್ಯ ನಡವಳಿಕೆಯನ್ನ ನಾವು ಖಂಡಿಸುತ್ತೇವೆ. ಸಂಬಂಧಿತ ಉದ್ಯೋಗಿಯನ್ನ ತಕ್ಷಣವೇ ಕರ್ತವ್ಯದಿಂದ ಅಮಾನತುಗೊಳಿಸಿದೆ. ಆಂತರಿಕ ತನಿಖೆಯ ಬಳಿಕ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದೆ

## ಜೆಸಿಬಿ ಘರ್ಜನೆ: 200 ಮನೆಗಳು ನೆಲಸಮ



**ಬೆಂಗಳೂರು**: ಸಿಲಿಕಾನ್ ಸಿಟಿ ಎಂದು ಕರೆಯಲಾಗುವ ಬೆಂಗಳೂರಿನಲ್ಲಿ ಇತ್ತೀಚೆಗೆ ಒತ್ತುವರಿ ತೆರವು ಕಾರ್ಯಾಚರಣೆಗಳು ತೀವ್ರಗೊಂಡಿವೆ. ಬೆಂಗಳೂರಿನ ಶ್ರೀನಿವಾಸಪುರದ ಕೋಗಿಲು ಲೇಔಟ್‌ನಲ್ಲಿ ತೆರವು ಕಾರ್ಯಾಚರಣೆ ನಡೆಸಲಾಯಿತು. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ಜಿಲ್ಲಾಡಳಿತದ ಸಂಯುಕ್ತ ಕಾರ್ಯಾಚರಣೆಯಲ್ಲಿ ಸುಮಾರು 200 ಅನಧಿಕೃತ ಮನೆಗಳನ್ನು ಜೆಸಿಬಿ ಮೂಲಕ ನೆಲಸಮಗೊಳಿಸಲಾಯಿತು.


ಈ ಕಾರ್ಯಾಚರಣೆಯಲ್ಲಿ 6 ಜೆಸಿಬಿಗಳು ಮತ್ತು ಸುಮಾರು 300 ಪೊಲೀಸ್ ಸಿಬ್ಬಂದಿ ಭಾಗಿಯಾಗಿದ್ದರು. ಬಿಗಿ ಭದ್ರತೆಯ ನಡುವೆ ಬೆಳಗ್ಗೆಯೇ ಆರಂಭವಾಗಿ 200 ಮನೆಗಳನ್ನು ನೆಲಸ ಮಗೊಳಿಸಲಾಗಿದೆ. ಒತ್ತುವರಿದಾರರು ನಿರ್ಮಿಸಿದ್ದ ಚಿಕ್ಕಚಿಕ್ಕ ಮನೆಗಳು ಕೆಲವೇ ಕ್ಷಣಗಳಲ್ಲಿ ನೆಲಸಮವಾದವು.

ಈ ಜಾಗವು ಮೂಲತಃ ಗೋಮಾಳ (ಗ್ರಾಮದ ಸಾರ್ವಜನಿಕ ಜಾಗ) ಆಗಿದ್ದು , ಜಿಲ್ಲಾಡಳಿತವು ಇದನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಥವಾ ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಹಸ್ತಾಂತರಿಸಿತ್ತು. ಆದರೆ, ಕೆಲವರು ಈ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಮನೆಗಳನ್ನು ನಿರ್ಮಿಸಿ ವಾಸಿಸುತ್ತಿದ್ದರು. ಬೆಂಗಳೂರಿನಲ್ಲಿ ಒತ್ತುವರಿ ಸಮಸ್ಯೆ ಹೊಸದಲ್ಲ.

ನಗರ ವಿಸ್ತರಣೆಯೊಂದಿಗೆ ಸರ್ಕಾರಿ ಜಾಗಗಳು, ಸರೋವರಗಳ ಬಫರ್ ಝೋನ್‌ಗಳು ಮತ್ತು ರಾಜಕಾಲುವೆಗಳ ಮೇಲೆ ಅನಧಿಕೃತ ನಿರ್ಮಾಣಗಳು ಹೆಚ್ಚಾಗಿವೆ. ಇದರಿಂದ ಮಳೆಗಾಲದಲ್ಲಿ ಪ್ರವಾಹದ ಸಮಸ್ಯೆ ಉಲ್ಬಣಗೊಂಡು, ನಗರದ ಅಭಿವೃದ್ಧಿಗೆ ತೊಡಕುಂಟುಮಾಡುತ್ತಿದೆ.

ಈ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಒತ್ತುವರಿ ತೆರವು ಕಾರ್ಯಾಚರಣೆಗಳನ್ನು ತೀವ್ರಗೊಳಿಸಿದೆ. ಹಿಂದಿನ ವರ್ಷಗಳಲ್ಲಿ ಬೆಂಗಳೂರಿನಲ್ಲಿ ಹಲವು ಒತ್ತುವರಿ ತೆರವು ಡ್ರೈವ್‌ಗಳು ನಡೆದಿವೆ. ಮಹದೇವಪುರ, ಯಲಹಂಕ ಸೇರಿದಂತೆ ಹಲವು ಪ್ರದೇಶಗಳಲ್ಲಿ ಅನಧಿಕೃತ ಕಟ್ಟಡಗಳನ್ನು ನೆಲಸಮಗೊಳಿಸಲಾಗಿತ್ತು.

## ಮದುವೆಯಾದ ಎಂಟೇ ತಿಂಗಳಿಗೆ ಪತ್ನಿಯನ್ನು ಥಳಿಸಿ ಕೊಂದ ಪತಿ



**ಹೈದರಾಬಾದ್:** ಪ್ರೀತಿಸಿ ಮದುವೆಯಾಗಿದ್ದ ಯುವತಿಯನ್ನು ವರದಕ್ಷಿಣೆಗಾಗಿ ಪತಿಯೇ ಥಳಿಸಿ ಕೊಂದ ಘಟನೆ ತೆಲಂಗಾಣದ ವಿಕಾರಾಬಾದ್ ಜಿಲ್ಲೆಯಲ್ಲಿ ನಡೆದಿದೆ. ಹತ್ಯೆಯಾದ ಮಹಿಳೆಯನ್ನು ಅನುಷಾ (22) ಎಂದು ಗುರುತಿಸಲಾಗಿದೆ. ಹತ್ಯೆ ಆರೋಪಿಯನ್ನು ಮರಮೇಶ್ ಕುಮಾರ್ ಎಂದು ಗುರುತಿಸಲಾಗಿದೆ. ಎಂಟು ತಿಂಗಳ ಹಿಂದಷ್ಟೆ ಇಬ್ಬರು ಮದುವೆಯಾಗಿದ್ದರು.

ವರದಕ್ಷಿಣೆಗಾಗಿ ಆಗಾಗ ಇಬ್ಬರ ನಡುವೆ ಜಗಳ ನಡೆಯುತ್ತಿತ್ತು ಎಂದು ತಿಳಿದುಬಂದಿದೆ. ಅನುಷಾ ಮೇಲೆ ಪರಮೇಶ್ ಹಲ್ಲೆ ನಡೆಸುತ್ತಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದ್ದು , ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ. ಘಟನೆಗೂ 2 ದಿನಗಳ ಮೊದಲು ಜಗಳವಾಡಿಕೊಂಡು ಅನುಷಾ ತವರು ಮನೆಗೆ ತೆರಳಿದ್ದರು. ಆದರೆ ಇನ್ನು ಮುಂದೆ ಯಾವುದೇ ಜಗಳ ನಡೆಯುವುದಿಲ್ಲ ಎಂದು ಕುಟುಂಬಕ್ಕೆ ಭರವಸೆ ನೀಡಿ ಪರಮೇಶ್ ಕುಮಾರ್ ಅವಳನ್ನು ಮರಳಿ ಕರೆದುಕೊಂಡು ಬಂದಿದ್ದ. ಬೈಕ್‌ನಲ್ಲಿ ಕರೆದುಕೊಂಡು ಮನೆಯ ಬಳಿ ಬಂದವನೇ ಆಕೆಯ ಮೇಲೆ ಹಲ್ಲೆ ನಡೆಸಿದ್ದಾನೆ. ಹೊಟ್ಟೆಗೆ ಒದ್ದು, ದೊಣ್ಣೆಯಿಂದ ಆರು ಬಾರಿ ತಲೆಗೆ ಹೊಡೆದಿದ್ದಾನೆ. ಈ ವೇಳೆ ಕೆಲವರು ತಡೆಯಲು ಯತ್ನಿಸಿದ್ದು, ಯಾವುದೇ ಪ್ರಯೋಜನವಾಗಿಲ್ಲ.

ಬಳಿಕ ಅನುಷಾಳನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ವೈದ್ಯರು ಆಕೆ ಮೃತಪಟ್ಟಿದ್ದಾಳೆಂದು ಘೋಷಿಸಿದ್ದಾರೆ. ಅನುಷಾಳ ಸಹೋದರ ದೂರು ದಾಖಲಿಸಿ ಆರೋಪಿ ಮತ್ತು ಆತನ ತಾಯಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಈ ಸಂಬಂಧ ಹೆಚ್ಚಿನ ತನಿಖೆ ಪ್ರಗತಿಯಲ್ಲಿದೆ

## ಅಯ್ಯಪ್ಪ ದೇಗುಲದ ಚಿನ್ನ ಕಳ್ಳತನ ಕೇಸ್: ಬಳ್ಳಾರಿಯ ಆಭರಣ ವ್ಯಾಪಾರಿ ಸೇರಿ ಇಬ್ಬರ ಬಂಧನ



**ತಿರುವನಂತಪುರ:** ಕೇರಳದ ಪ್ರಸಿದ್ಧ ಶಬರಿಮಲೆ ಅಯ್ಯಪ್ಪ ದೇವಸ್ಥಾನದಲ್ಲಿ ನಡೆದ ಚಿನ್ನದ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ (ಎಸ್‌ಐಟಿ) ಇದೀಗ ಮತ್ತಿಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಸ್ಮಾರ್ಟ್ ಕ್ರಿಯೇಷನ್ಸ್ ಸಂಸ್ಥೆಯ ಸಿಇಒ ಪಂಕಜ್ ಭಂಡಾರಿ ಹಾಗೂ ಬಳ್ಳಾರಿಯಲ್ಲಿ ನೆಲೆಸಿರುವ ಆಭರಣ ವ್ಯಾಪಾರಿ ಗೋವರ್ಧನ್ ಅವರನ್ನು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಶಬರಿಮಲೆ ದೇಗುಲದ ದ್ವಾರಪಾಲಕ ಮೂರ್ತಿಗಳನ್ನು ಕೆಲಸದ ನೆಪದಲ್ಲಿ ತೆಗೆದುಕೊಂಡು ಹೋಗಿದ್ದ ಪಂಕಜ್ ಭಂಡಾರಿ, ಅವುಗಳಲ್ಲಿ ಅಳವಡಿಸಲಾಗಿದ್ದ ಚಿನ್ನದ ಭಾಗವನ್ನು ತೆಗೆದು ದುರುಪಯೋಗ ಮಾಡಿಕೊಂಡಿದ್ದಾರೆ ಎಂಬ ಗಂಭೀರ ಆರೋಪ ಎದುರಿಸುತ್ತಿದ್ದಾರೆ.

ಮೂರ್ತಿಗಳ ಮೂಲ ತೂಕಕ್ಕಿಂತ ಕಡಿಮೆ ತೂಕ ಕಂಡುಬಂದಿರುವುದು ಈ ಕಳ್ಳತನದ ಶಂಕೆ ವ್ಯಕ್ತವಾಗಿತ್ತು. ಮೂರ್ತಿಗಳಿಂದ ತೆಗೆದ ಚಿನ್ನವನ್ನು ಬಳ್ಳಾರಿಯ ಆಭರಣ ವ್ಯಾಪಾರಿ ಗೋವರ್ಧನ್ ಅವರಿಗೆ ಮಾರಾಟ ಮಾಡಲಾಗಿದೆ ಎಂದು ಎಸ್‌ಐಟಿ ಆರೋಪಿಸಿದೆ. ಈ ಪ್ರಕರಣದ ಆರಂಭಿಕ ತನಿಖೆಯಲ್ಲಿ ಅಕ್ಟೋಬರ್ 28 ರಂದು ಎಸ್‌ಐಟಿ ತಂಡವು ಗೋವರ್ಧನ್ ಅವರ ಬಳ್ಳಾರಿಯ ಚಿನ್ನದ ಅಂಗಡಿಗೆ ದಾಳಿ ನಡೆಸಿತ್ತು. ದಾಳಿ ವೇಳೆ ಗೋವರ್ಧನ್, ಈ ಹಗರಣದಲ್ಲಿ ತನ್ನ ಪಾತ್ರವಿಲ್ಲ ಎಂದು ಹೇಳಿಕೊಂಡಿದ್ದರು. ಚಿನ್ನದ ಹೊದಿಕೆಯ ಬಾಗಿಲಿಗೆ ಸಂಬಂಧಿಸಿದಂತೆ ತಾನು ದೇಣಿಗೆಯಾಗಿ ಹಣ ನೀಡಿದ್ದೇನೆ ಹೊರತು, ಕಳ್ಳತನಕ್ಕೆ ಯಾವುದೇ ಸಂಬಂಧವಿಲ್ಲ ಎಂದು ಅವರು ಸಮರ್ಥಿಸಿಕೊಂಡಿದ್ದರು.

ಆದರೆ ಈ ಪ್ರಕರಣದ ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ ನೀಡಿದ ಹೇಳಿಕೆಗಳು ಮಹತ್ವ ಪಡೆದುಕೊಂಡಿವೆ. 2019ರಲ್ಲಿ ಶಬರಿಮಲೆ ದೇವಸ್ಥಾನಕ್ಕೆ ಚಿನ್ನದ ಲೇಪಿತ ಬಾಗಿಲನ್ನು ಸಮರ್ಪಿಸುವ ಉದ್ದೇಶದಿಂದ ಗೋವರ್ಧನ್ ಅವರನ್ನು ಸಂಪರ್ಕಿಸಿದ್ದೆ ಎಂದು ಉನ್ನಿಕೃಷ್ಣನ್ ಪೊಟ್ಟಿ ತಿಳಿಸಿದ್ದಾರೆ. ಬಳ್ಳಾರಿಯಲ್ಲಿ ತಯಾರಿಸಲಾದ ಹೊಸ ಬಾಗಿಲನ್ನು ಶಬರಿಮಲೆ ದೇವಸ್ಥಾನಕ್ಕೆ ಸಾಗಿಸುವ ಮೊದಲು ಗೋವರ್ಧನ್ ಅವರ ಆಭರಣ ಅಂಗಡಿಯಲ್ಲಿ ಸಾರ್ವಜನಿಕ ಪ್ರದರ್ಶನಕ್ಕೆ ಇಡಲಾಗಿತ್ತು ಎಂಬ ಮಾಹಿತಿ ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಈ ಇಬ್ಬರ ಬಂಧನದೊಂದಿಗೆ ಶಬರಿಮಲೆ ಚಿನ್ನ ಕಳ್ಳತನ ಪ್ರಕರಣದಲ್ಲಿ ಬಂಧಿತರ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ. ಡಿಸೆಂಬರ್ 17ರಂದು ಶಬರಿಮಲೆಯ ಮಾಜಿ ಆಡಳಿತಾಧಿಕಾರಿ ಶ್ರೀಕುಮಾರ್ ಅವರನ್ನು ಎಸ್‌ಐಟಿ ಬಂಧಿಸಿತ್ತು.

2019ರಲ್ಲಿ ದ್ವಾರಪಾಲಕ ವಿಗ್ರಹಗಳ ಚಿನ್ನದ ಫಲಕಗಳನ್ನು ತೆಗೆದು ಚೆನ್ನೈಗೆ ಸಾಗಿಸಿದ ಸಮಯದಲ್ಲಿ ಅವರು ಆಡಳಿತಾಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದರು ಎಂಬುದು ತನಿಖೆಯಲ್ಲಿ ದೃಢಪಟ್ಟಿದೆ. ಇದಕ್ಕೂ ಮೊದಲು, ನವೆಂಬರ್ ತಿಂಗಳಲ್ಲಿ ಎಸ್‌ಐಟಿ ಮಾಜಿ ತಿರುವಾಂಕೂರು ದೇವಸ್ವಂ ಮಂಡಳಿಯ (TDB) ಅಧ್ಯಕ್ಷ ಹಾಗೂ ಸಿಪಿಎಂ ನಾಯಕ ಎ. ಪದ್ಮಕುಮಾರ್ ಅವರನ್ನು ಬಂಧಿಸಿತ್ತು.

ಈ ಪ್ರಕರಣದಲ್ಲಿ ಅವರನ್ನು ಎಂಟನೇ ಆರೋಪಿ ಎಂದು ಹೆಸರಿಸಲಾಗಿದೆ. ಪ್ರಕರಣದ ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ ಸೇರಿದಂತೆ, ಮಾಜಿ ಟಿಡಿಬಿ ಅಧ್ಯಕ್ಷ ಎನ್. ವಾಸು, ಮಾಜಿ ಆಡಳಿತಾಧಿಕಾರಿ ಮುರಾರಿ ಬಾಬು, ಮಾಜಿ ಕಾರ್ಯನಿರ್ವಾಹಕ ಅಧಿಕಾರಿ ಡಿ. ಸುಧೀಶ್ ಕುಮಾರ್ ಹಾಗೂ ತಿರುವಾಭರಣಂನ ಮಾಜಿ ಆಯುಕ್ತ ಕೆ.ಎಸ್. ಬೈಜು ಈಗಾಗಲೇ ಬಂಧನಕ್ಕೊಳಗಾಗಿದ್ದಾರೆ.

## ಹಿಂದೂ ಯುವಕನ ಕ್ರೂರ ಹತ್ಯೆ – 7 ಮಂದಿ ಅರೆಸ್ಟ್



**ಢಾಕಾ:** ಬಾಂಗ್ಲಾದೇಶದ ಮೈಮನ್‌ಸಿಂಗ್ ಜಿಲ್ಲೆಯ ಭಾಲುಕಾ ಪ್ರದೇಶದಲ್ಲಿ ನಡೆದ ಹಿಂದೂ ಯುವಕನ ಕ್ರೂರ ಹತ್ಯೆ ಪ್ರಕರಣ ಸಂಬಂಧ 7 ಮಂದಿಯನ್ನ ಬಂಧಿಸಲಾಗಿದೆ ಎಂದು ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನಸ್ ದೃಢಪಡಿಸಿದ್ದಾರೆ. ದೀಪು ಚಂದ್ರ ದಾಸ್ ಎನ್ನುವ ಗಾರ್ಮೆಂಟ್ ಕಾರ್ಖಾನೆ ಕಾರ್ಮಿಕನನ್ನ ಗುರುವಾರ ರಾತ್ರಿ ಸ್ಥಳೀಯರ ಗುಂಪೊಂದು ಥಳಿಸಿ ಕೊಂದಿತ್ತು. ಪ್ರವಾದಿ ಮೊಹಮ್ಮದ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ್ದನೆಂದು ಆರೋಪಿಸಿ ಸ್ಥಳೀಯ ನಿವಾಸಿಗಳ ಗುಂಪು ಹತ್ಯೆ ಮಾಡಿತ್ತು.


ಬಳಿಕ ಮರಕ್ಕೆ ಕಟ್ಟಿ ಬೆಂಕಿ ಹಚ್ಚಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ರ್‍ಯಾಪಿಡ್ ಆಕ್ಷನ್ ಬೆಟಾಲಿಯನ್ ವಿಶೇಷ ಕಾರ್ಯಾಚರಣೆ ನಡೆಸಿ ವಿವಿಧೆಡೆಗಳಿಂದ 7 ಆರೋಪಿಗಳನ್ನು ಬಂಧಿಸಿದೆ. ಬಂಧಿತರಲ್ಲಿ ಮೊಹಮ್ಮದ್ ಲಿಮೋನ್ ಸೊರ್ವಾರ್ (19), ಮೊಹಮ್ಮದ್ ತಾರೆಕ್ ಹುಸೇನ್, ಮೊಹಮ್ಮದ್ ಮಾನಿಕ್ ಮಿಯಾ (20), ಇರ್ಶಾದ್ ಅಲಿ (39), ನಿಜುಮ್ ಉದ್ದೀನ್ (20), ಅಲಮ್‌ಗೀರ್ ಹುಸೇನ್ (38) ಮತ್ತು ಮೊಹಮ್ಮದ್ ಮಿರಾಜ್ ಹುಸೇನ್ ಅಕೋನ್ (47) ಸೇರಿದ್ದಾರೆ. ತನಿಖೆ ಮುಂದುವರಿದಿದ್ದು , ಆರೋಪಿಗಳ ವಿಚಾರಣೆ ನಡೆಯುತ್ತಿದೆ. ಈ ಘಟನೆಯನ್ನ ತೀವ್ರವಾಗಿ ಖಂಡಿಸಿರುವ ಯೂನಸ್ ಸರ್ಕಾರ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಪೂರ್ಣ ಬದ್ಧವಾಗಿದೆ. ತಪ್ಪಿತಸ್ಥರನ್ನ ನ್ಯಾಯದ ಮುಂದೆ ತರಲಾಗುವುದು ಎಂದು ಸಾಮಾಜಿಕ ಜಾಲತಾಣಗಳಲ್ಲಿ ಹೇಳಿಕೆ ನೀಡಿದ್ದಾರೆ. ಈ ಘಟನೆ ಮಾನವತೆಗೆ ವಿರೋಧವಾದ ಅಪರಾಧ ಮಾತ್ರವಲ್ಲ, ಸಾಮಾಜಿಕ ಸಾಮರಸ್ಯಕ್ಕೆ ಧಕ್ಕೆ ತರುವ ಪ್ರಯತ್ನ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿ ನಾಯಕ ಶರೀಫ್ ಉಸ್ಮಾನ್ ಹಾದಿ ಅವರ ಮರಣದ ನಂತರ ಉಂಟಾದ ಹಿಂಸಾಚಾರದಲ್ಲಿ ಅಲ್ಪಸಂಖ್ಯಾತರ ಮೇಲಿನ ದಾಳಿಗಳು ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಈ ಪ್ರಕರಣ ಗಮನ ಸೆಳೆದಿದೆ. ಸರ್ಕಾರವು ಎಲ್ಲಾ ನಾಗರಿಕರನ್ನ ಹಿಂಸಾಚಾರ, ದ್ವೇಷ ಮತ್ತು ಉತ್ತೇಜನೆಯನ್ನು ತಿರಸ್ಕರಿಸಿ ಶಾಂತಿಯನ್ನು ಕಾಪಾಡುವಂತೆ ಸರ್ಕಾರ ಕರೆ ನೀಡಿದೆ. ಭಯೋತ್ಪಾದಕ ಗುಂಪುಗಳ ಬಗ್ಗೆ ಎಚ್ಚರ ವಹಿಸಿ ಇನ್ನೂ ಬಾಂಗ್ಲಾದಲ್ಲಿ ಕೆಲ ಭಯೋತ್ಪಾದಕ ಗುಂಪುಗಳು ಹಿಂಸಾಚಾರಕ್ಕೆ ಪ್ರಚೋದನೆ ನೀಡುತ್ತಿವೆ ಅನ್ನೋ ಸಂಶಯ ವ್ಯಕ್ತವಾಗಿದೆ.

ಈ ಹಿನ್ನೆಲೆ ನಾಗರಿಕರು ಎಚ್ಚರದಿಂದಿರುವಂತೆ ಬಾಂಗ್ಲಾ ಮಧ್ಯಂತರ ಸರ್ಕಾರ ಸಲಹೆ ನೀಡಿದೆ. ಕೆಲವು ಪ್ರತ್ಯೇಕ ಭಯೋತ್ಪಾದಕ ಗುಂಪುಗಳು ನಡೆಸುತ್ತಿರುವ ಎಲ್ಲಾ ರೀತಿಯ ಹಿಂಸಾಚಾರದ ವಿರುದ್ಧ ಜಾಗರೂಕವಾಗಿರಬೇಕು. ಹಿಂಸಾತ್ಮಕ ಘಟನೆಗಳನ್ನ ನಾವು ಬಲವಾಗಿ ಖಂಡಿಸುತ್ತೇವೆ, ದೇಶದಲ್ಲಿ ಅಶಾಂತಿ ಸೃಷ್ಟಿಸಲು ನಾವು ಬಿಡೋದಿಲ್ಲ ಎಂದು ಹೇಳಿದೆ.ಹಿಂಸಾಚಾರ ಭುಗಿಲೆದ್ದಿದ್ದು ಹೇಗೆ? 2024ರ ಡಿ.12ರಂದು ಬಾಂಗ್ಲಾದೇಶ ವಿದ್ಯಾರ್ಥಿ ದಂಗೆಯ ನೇತೃತ್ವವಹಿಸಿದ್ದ ಷರೀಫ್ ಉಸ್ಮಾನ್ ಹಾದಿ ಅವರ ಮೇಲೆ, ಕಳೆದ ವಾರ ಮುಸುಕುಧಾರಿಗಳ ಗುಂಪೊಂದು ಗುಂಡಿನ ದಾಳಿ ನಡೆಸಿತ್ತು.

ಹಾದಿ ಅವರಿಗೆ ಸಿಂಗಾಪುರದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಚಿಕಿತೆ ಫಲಕಾರಿಯಾಗದೇ ಹಾದಿ ಮೃತಪಟ್ಟಿದ್ದ. ಈ ವಿಷಯ ತಿಳಿಯುತ್ತಿದ್ದಂತೆ ಹಿಂಸಾಚಾರ ಭುಗಿಲೆದ್ದಿತ್ತು. ಉಸ್ಮಾನ್ ಹಾದಿ ಭಾರತ ವಿರೋಧಿ ಭಾಷಣಗಳಿಂದ ಹೆಚ್ಚು ಫೇಮಸ್ ಆಗಿದ್ದ.

## ಬಿಜೆಪಿ ಕಾರ್ಯಕರ್ತನ ಮನೆದಲ್ಲಿ ದುರಂತ; ಕಾರ್ಯಕರ್ತೆ ಆತ್ಮಹತ್ಯೆ



**ಕಲಬುರಗಿ:**ಜಿಲ್ಲೆಯ ನಂದಿಕೂರ್ ಗ್ರಾಮದಲ್ಲಿ ಬಿಜೆಪಿ (BJP) ಕಾರ್ಯಕರ್ತೆ ಜ್ಯೋತಿ ಪಾಟೀಲ್ ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತೀವ್ರ ಸಂಚಲನಕ್ಕೆ ಕಾರಣವಾಗಿದೆ. ಈ ಘಟನೆ ಬಿಜೆಪಿ ಕಾರ್ಯಕರ್ತ ಮಲ್ಲಿನಾಥ್ ಬಿರಾದಾರ ಅವರ ಮನೆಯ ಆವರಣದಲ್ಲಿ ನಡೆದಿದ್ದು, ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಘಟನೆ ಬಳಿಕ ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು , ಇದೀಗ ಬಿಜೆಪಿ ಕಾರ್ಯಕರ್ತ ಮಲ್ಲಿನಾಥ್ ಬಿರಾದಾರರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಆತ್ಮಹತ್ಯೆ ನಡೆದ ಮಲ್ಲಿನಾಥ್ ಬಿರಾದಾರರ ಮನೆ ನಂದಿಕೂರ್ ಗ್ರಾಮದಲ್ಲಿದ್ದು, ಘಟನೆ ನಂತರ ಕುಟುಂಬಸ್ಥರು ಮನೆ ಖಾಲಿ ಮಾಡಿಕೊಂಡು ತೆರಳಿದ್ದಾರೆ. ಸದ್ಯ ಮನೆಗೆ ಬೀಗ ಹಾಕಲಾಗಿದ್ದು , ಸ್ಥಳದಲ್ಲಿ ನಿಶ್ಯಬ್ದ ವಾತಾವರಣ ನಿರ್ಮಾಣವಾಗಿದೆ. ಪೊಲೀಸ್ ಮೂಲಗಳಿಂದ ದೊರೆತ ಮಾಹಿತಿ ಪ್ರಕಾರ, ಜ್ಯೋತಿ ಪಾಟೀಲ್ ತಡರಾತ್ರಿ ಮಲ್ಲಿನಾಥ್ ಬಿರಾದಾರರ ಮನೆ ಮುಂದೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡಿದ್ದಾರೆ ಎನ್ನಲಾಗಿದೆ. ಮಲ್ಲಿನಾಥ್ ಮನೆಯಲ್ಲಿ ಇಲ್ಲದ ವೇಳೆಯಲ್ಲಿ ಜ್ಯೋತಿ ಪಾಟೀಲ್ ಬಾಗಿಲು ಬಡಿದಿದ್ದರು. ಮಲ್ಲಿನಾಥ್ ಬಿರಾದಾರ್ ಪತ್ನಿ, ಮೂವರು ಮಕ್ಕಳು ಮನೆಯಲ್ಲಿ ವಾಸಮಾಡುತ್ತಿದ್ದರು.

ಇವರು ಬಾಗಿಲು ತೆರೆದ ತಕ್ಷಣ ಜ್ಯೋತಿ ಪಾಟೀಲ್ ಬೆಂಕಿ ಹಚ್ಚಿಕೊಂಡಿದ್ದಾರೆ ಎನ್ನಲಾಗಿದೆ. ಜ್ಯೋತಿ ಪಾಟೀಲ್ ಕಲಬುರಗಿಯ ಬ್ರಹ್ಮಪುರ ಬಡಾವಣೆಯ ನಿವಾಸಿಯಾಗಿದ್ದಾರೆ. ಆದರೆ ಈ ಸಾವು ಆತ್ಮಹತ್ಯೆಯೇ ಅಥವಾ ಬೇರೆ ಕಾರಣವಿದೆಯೇ ಎಂಬ ಬಗ್ಗೆ ತನಿಖೆ ಮುಂದುವರಿದಿದೆ. ಬಿಜೆಪಿ ಕಾರ್ಯಕರ್ತೆ ಜ್ಯೋತಿ ಪಾಟೀಲ್ ಅವರ ಪತಿ ಚಿದಾನಂದ ಅವರು ಸಾವಿನ ಕುರಿತು ಅನುಮಾನ ವ್ಯಕ್ತಪಡಿಸಿದ್ದಾರೆ. ಇದು ಆತ್ಮಹತ್ಯೆ ಎಂದು ನನಗೆ ಅನಿಸುತ್ತಿಲ್ಲ. ಅವಳು ಯಾಕೆ ಪೆಟ್ರೋಲ್ ಸುರಿದುಕೊಂಡು ಸಾಯಬೇಕು? ಇದು ಕೊಲೆ ಆಗಿರಬಹುದೆಂಬ ಶಂಕೆ ಇದೆ ಎಂದು ಅವರು ಹೇಳಿದ್ದಾರೆ

ಘಟನೆಯ ಎಲ್ಲ ಆಯಾಮಗಳನ್ನು ಗಮನದಲ್ಲಿಟ್ಟುಕೊಂಡು ಫರಹತಾಬಾದ್ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆತ್ಮಹತ್ಯೆಯ ಹಿಂದಿನ ನಿಜವಾದ ಕಾರಣ ಏನು, ಯಾರಾದರೂ ಇದಕ್ಕೆ ಕಾರಣರಾಗಿದ್ದಾರೆಯೇ ಎಂಬುದನ್ನು ಪತ್ತೆಹಚ್ಚಲು ಪೊಲೀಸರು ಸಾಕ್ಷ್ಯ ಸಂಗ್ರಹ ಹಾಗೂ ವಿಚಾರಣೆ ಮುಂದುವರಿಸಿದ್ದಾರೆ..

## ರೈಲ್ವೇ ಹಳಿಯಲ್ಲಿ ಆತ್ಮಹತ್ಯೆ ಯತ್ನ ಪ್ರಕರಣ ದಾಖಲು



**ಶಿವಮೊಗ್ಗ:** ಸಾಗರದ ಚಂದ್ರಮಾವಿನ ಕೊಪ್ಪಲು ಎಂಬಲ್ಲಿ ರೈಲಿನ ಅಡಿಗೆ ಹಾರಿ ವ್ಯಕ್ತಿಯೊಬ್ಬರು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಸಂಭವಿಸಿದೆ. ತಾಳಗುಪ್ಪದಿಂದ ಮೈಸೂರಿನತ್ತ ಸಾಗುತ್ತಿದ್ದ ರೈಲು ಚಂದ್ರಮಾವಿನ ಕೊಪ್ಪಲು ಸಮೀಪಿಸುತ್ತಿದ್ದಂತೆ, ಹಳಿಗಳ ಮೇಲೆ ಜಿಗಿದು ಆತ್ಮಹತ್ಯೆಗೆ ಮುಂದಾಗಿದ್ದಾರೆ.

ಈ ಸಂದರ್ಭದಲ್ಲಿ ಲೋಕೋ ಪೈಲಟ್ ಸಮಯ ಪ್ರಜ್ಞೆ ಮೆರೆದು ತಕ್ಷಣವೇ ಬ್ರೇಕ್ ಹಾಕಿ ನಿಲ್ಲಿಸಿದ್ದಾರೆ. ಕೂಡಲೇ ರೈಲನ್ನು ನಿಲ್ಲಿಸಿ ಕೆಳಗಿಳಿದು ರಕ್ಷಣಾ ಕಾರ್ಯಕ್ಕೆ ಧಾವಿಸಿದ್ದಾರೆ. ಸ್ಥಳದಲ್ಲಿದ್ದ ಖಾಸಗಿ ಆಂಬ್ಯುಲೆನ್ಸ್ ಮಾಲೀಕ ಗಂಗಾಧರ್ ಅವರ ನೆರವಿನೊಂದಿಗೆ ಗಾಯಾಳುವನ್ನು ತಕ್ಷಣವೇ ಸಾಗರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ವೈದ್ಯರು ಹೆಚ್ಚಿನ ಚಿಕಿತ್ಸೆಗಾಗಿ ಅವರನ್ನು ಶಿವಮೊಗ್ಗ ಜಿಲ್ಲಾ ಆಸ್ಪತ್ರೆಗೆ ರವಾನಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಸಿಎಂ ಕುರ್ಚಿ ಸಮರದ ನಡುವೆ ಡಿ.ಕೆ ಶಿವಕುಮಾರ್‌ಗೆ ನಾಗಸಾಧುಗಳ ಆಶೀರ್ವಾದ



**ಬೆಂಗಳೂರು:** ರಾಜ್ಯ ರಾಜಕಾರಣದಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ನಡೆಯುತ್ತಿರುವ ಹೋರಾಟ ದಿನೇ ದಿನೇ ಹೊಸ ತಿರುವು ಪಡೆದುಕೊಳ್ಳುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವಿನ ಶೀತಲ ಸಮರ ಇದೀಗ ಮತ್ತೊಂದು ಅಚ್ಚ ರಿಯ ಬೆಳವಣಿಗೆಯಿಂದ ಭಾರೀ ಚರ್ಚೆಗೆ ಗ್ರಾಸವಾಗಿದೆ. ಸದಾಶಿವನಗರದಲ್ಲಿರುವ ಡಿಕೆಶಿ ನಿವಾಸಕ್ಕೆ 20ಕ್ಕೂ ಹೆಚ್ಚು ಹರಿದ್ವಾರದ ನಾಗಸಾಧುಗಳು ದಿಢೀರ್ ಭೇಟಿ ನೀಡಿ ಉಪಮುಖ್ಯಮಂತ್ರಿಗೆ ಆಶೀರ್ವಾಸಿದ್ದಾರೆ.

ಇತ್ತೀಚೆಗೆ ಕಾಶಿಯಿಂದ ಆಗಮಿಸಿದ್ದ ನಾಗಸಾಧುಗಳು ಡಿಕೆಶಿ ಮುಖ್ಯಮಂತ್ರಿ ಆಗಲೆಂದು ಆಶೀರ್ವಾದ ಮಾಡಿದ್ದರು ಎಂಬ ಸುದ್ದಿ ಇನ್ನೂ ತಣ್ಣಗಾಗುವ ಮೊದಲೇ, ಇದೀಗ ಹರಿದ್ವಾರದಿಂದ ಬಂದ ನಾಗಸಾಧುಗಳ ತಂಡ ಡಿಕೆಶಿ ಮನೆಗೆ ಭೇಟಿ ನೀಡಿರುವುದು ವಿಶೇಷ. ಸಿಎಂ ಕುರ್ಚಿ ಕುರಿತ ಕಾಂಗ್ರೆಸ್ ಒಳ ರಾಜ ಕಾರಣ ತೀವ್ರಗೊಂಡಿರುವ ಹೊತ್ತಿನಲ್ಲಿ ಈ ಭೇಟಿ ಹಲವು ಕುತೂಹಲ ಮೂಡಿಸಿದೆ. ನಾಗಸಾಧುಗಳ ಆಶೀರ್ವಾದದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಡಿಕೆ ಶಿವಕುಮಾರ್, ಈ ಭೇಟಿಗೆ ಯಾವುದೇ ರಾಜಕೀಯ ಅರ್ಥ ಕಲ್ಪಿಸಬಾರದು ಎಂದು ಸ್ಪಷ್ಟಪಡಿಸಿದರು. "ಅವರು ನನ್ನ ಮನೆಯ ಬಾಗಿಲಿಗೆ ಬಂದಿದ್ದರು. ಬಂದವರನ್ನು ಹೋಗಿ ಎಂದು ಹೇಳಲು ಆಗುವುದಿಲ್ಲ. ಅವರು ಬಂದು ಆಶೀರ್ವಾದ ಮಾಡಿದರು, ನಾನು ಸ್ವೀಕರಿಸಿದೆ. ಮನೆಗೆ ಬಂದ ಅತಿಥಿಗಳನ್ನು ಹಾಗೆಯೇ ಕಳುಹಿಸಲು ಸಾಧ್ಯವಿಲ್ಲ" ಎಂದು ಡಿಕೆಶಿ ಹೇಳಿದರು.

ಈ ನಡುವೆ ಡಿಕೆಶಿ ತಮ್ಮ ಮುಂದಿನ ದೆಹಲಿ ಪ್ರವಾಸದ ಕುರಿತೂ ಮಾಹಿತಿ ನೀಡಿದರು. "ಮಂಗಳವಾರ ನಾನು ದೆಹಲಿಗೆ ಹೋಗುತ್ತಿದ್ದೇನೆ. ಜಲಮಂಡಳಿಯಿಂದ ಸಂಬಂಧಿಸಿದ ಕೆಲವು ಕೆಲಸಗಳಿವೆ. ಮೇಕೆದಾಟು ಯೋಜನೆ ಕುರಿತೂ ಚರ್ಚೆ ನಡೆಯಲಿದೆ. ಇಲಾಖೆಯ ಕೆಲಸಗಳ ಬಗ್ಗೆ ಮಾತುಕತೆ ನಡೆಸಲು ದೆಹಲಿಗೆ ಹೋಗುತ್ತಿದ್ದೇನೆ" ಎಂದು ಹೇಳಿದರು. ದೆಹಲಿಯಲ್ಲಿ ಹೈಕಮಾಮಂಡ್ ಭೇಟಿ ವಿಚಾರ ಕುರಿತು ಮಾತನಾಡಿದ ಅವರು,"ಹೈಕಮಾಂಡ್ ಭೇಟಿ ಇದ್ದರೆ ನಿಮಗೆ ಹೇಳಿಯೇ ಹೋಗುತ್ತೇನೆ. ನಿಮಗೆ ಹೇಳದೆ ನಾನು ಹೋಗಲ್ಲ" ಎಂದು ಡಿಕೆಶಿ ಸ್ಪಷ್ಟಪಡಿಸಿದರು.

ಇನ್ನೊಂದೆಡೆ, ಕೇಂದ್ರ ಸರ್ಕಾರ ನರೇಗಾ ಯೋಜನೆಯ ಹೆಸರನ್ನು ಬದಲಾಯಿಸಿರುವ ವಿಚಾರದ ಕುರಿತು ಡಿಕೆಶಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. "ಅವರು ಬೇಕಾದರೆ ನೋಟಿನ ಮೇಲಿರುವ ಫೋಟೋ ತೆಗೆಯಲಿ. ಆದರೆ ಮಹಾತ್ಮ ಗಾಂಧೀಜಿ ಅವರ ಹೆಸರನ್ನು ತೆಗೆದುಹಾಕುವುದು ದೊಡ್ಡ ಅನ್ಯಾಯ. ಇದು ಕೇಂದ್ರ ಸರ್ಕಾರ ಮಾಡಿದ ಭಾರಿ ತಪ್ಪು, ಇದಕ್ಕೆ ಜನರೇ ಉತ್ತರ ನೀಡುತ್ತಾರೆ" ಎಂದು ಕಿಡಿಕಾರಿದರು.

## SIR ಕರಡು ಪಟ್ಟಿ ಪ್ರಕಟ; 14.25 ಲಕ್ಷ ಮತದಾರರ ಹೆಸರು ಡಿಲೀಟ್



**ಚೆನ್ನೈ:** ತಮಿಳುನಾಡಿನಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಭಾರತೀಯ ಚುನಾವಣಾ ಆಯೋಗ ರಾಜ್ಯದ ಕರಡು ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಿದೆ. ಈ ಪರಿಷ್ಕರಣೆಯಲ್ಲಿ ಭಾರೀ ಸಂಖ್ಯೆಯ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದ್ದು, ರಾಜಧಾನಿ ಚೆನ್ನೈನಲ್ಲಿ ಮಾತ್ರವೇ 14.25 ಲಕ್ಷ ಮತದಾರರ ಹೆಸರುಗಳು ಡಿಲಿಟ್ ಆಗಿರುವುದು ಗಮನ ಸೆಳೆದಿದೆ. ಕರಡು SIR ಪಟ್ಟಿಯ ಪ್ರಕಾರ, ಚೆನ್ನೈ ನಗರದ ಒಟ್ಟು ಮತದಾರರ ಸಂಖ್ಯೆ ಈ ಹಿಂದೆ 40.04 ಲಕ್ಷವಾಗಿದ್ದು, ಈಗ ಅದು 25.79 ಲಕ್ಷಕ್ಕೆ ಇಳಿಕೆಯಾಗಿದೆ..

ಚುನಾವಣಾ ಆಯೋಗದ ಮಾಹಿತಿ ಪ್ರಕಾರ, ಈ ಅಳವಡಿಕೆಯ ಹಿಂದೆ ಹಲವಾರು ಪ್ರಮುಖ ಕಾರಣಗಳಿವೆ ಚೆನ್ನೈನಲ್ಲಿ ತೆಗೆದುಹಾಕಲಾದ ಮತದಾರರಲ್ಲಿ 1.56 ಲಕ್ಷ ಮಂದಿ ಮೃತರಾಗಿರುವುದು ದೃಢಪಟ್ಟಿದೆ.


ಇನ್ನು 27,323 ಮತದಾರರು ತಮ್ಮ ಪಟ್ಟಿಯಲ್ಲಿರುವ ವಿಳಾಸಗಳಲ್ಲಿ ಲಭ್ಯವಾಗಿಲ್ಲ ಎಂದು ಗುರುತಿಸಲಾಗಿದೆ. ಅತ್ಯಂತ ಹೆಚ್ಚಿನ ಸಂಖ್ಯೆಯಾದ 12.22 ಲಕ್ಷ ಮತದಾರರು ತಮ್ಮ ನಿವಾಸವನ್ನು ಬದಲಾಯಿಸಿಕೊಂಡಿರುವುದರಿಂದ ಪಟ್ಟಿಯಿಂದ ಹೊರಗಿಡಲಾಗಿದೆ. ಜೊತೆಗೆ 18,772 ಡಬಲ್ ನೋಂದಣಿ ಪ್ರಕರಣಗಳನ್ನೂ ಪತ್ತೆಹಚ್ಚಲಾಗಿದೆ. ಚೆನ್ನೈ ಮಾತ್ರವಲ್ಲದೆ, ರಾಜ್ಯದ ಇತರೆ ಜಿಲ್ಲೆಗಳಲ್ಲೂ ದೊಡ್ಡ ಮಟ್ಟದಲ್ಲಿ ಮತದಾರರ ಹೆಸರುಗಳನ್ನು ಕರಡು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಕೊಯಮತ್ತೂರು ಜಿಲ್ಲೆಯಲ್ಲಿ 6.50 ಲಕ್ಷ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ. ದಿಂಡಿಗಲ್ ಜಿಲ್ಲೆಯಲ್ಲಿ 2.34 ಲಕ್ಷ ಮತದಾರರ ಹೆಸರುಗಳು ಅಳಿಸಲಾಗಿದ್ದು, ಈ ಮೂಲಕ ಜಿಲ್ಲೆಯಲ್ಲಿ ಮತದಾರರ ಸಂಖ್ಯೆ ಪರಿಷ್ಕರಣೆಗೆ ಮೊದಲು ಇದ್ದ 19.35 ಲಕ್ಷದಿಂದ 16.09 ಲಕ್ಷಕ್ಕೆ ಇಳಿಕೆಯಾಗಿದೆ. ಕರೂರ್ ಜಿಲ್ಲೆಯಲ್ಲಿ 79,690 ಮತದಾರರನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಇದರಿಂದ ಕರೂರ್‌ನ ಒಟ್ಟು ಮತದಾರರ ಸಂಖ್ಯೆ 8.79 ಲಕ್ಷದಿಂದ 8.18 ಲಕ್ಷಕ್ಕೆ ಕುಸಿದಿದೆ. ಕಾಂಚಿಪುರಂ ಜಿಲ್ಲೆಯಲ್ಲಿ 2.74 ಲಕ್ಷ ಮತದಾರರ ಹೆಸರುಗಳು ಕರಡು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಚುನಾವಣಾ ಆಯೋಗದ ಪ್ರಕಾರ, ಈ ವಿಶೇಷ ತೀವ್ರ ಪರಿಷ್ಕರಣೆಯ ಮುಖ್ಯ ಉದ್ದೇಶ ಮತದಾರರ ಪಟ್ಟಿಯ ನಿಖರತೆಯನ್ನು ಹೆಚ್ಚಿಸುವುದಾಗಿದೆ.

ಮೃತ ಮತದಾರರು, ನಕಲಿ ನೋಂದಣಿಗಳು, ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ಹೆಸರು ಇರುವವರು ಹಾಗೂ ನಿವಾಸ ಬದಲಾಯಿಸಿದವರ ವಿವರಗಳನ್ನು ತೆಗೆದುಹಾಕುವ ಮೂಲಕ ಪಾರದರ್ಶಕ ಹಾಗೂ ನಿಖರ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು SIR ಪ್ರಕ್ರಿಯೆಯ ಗುರಿಯಾಗಿದೆ. ಇದೇ ರೀತಿಯ ಪರಿಷ್ಕರಣೆ ಇತ್ತೀಚೆಗೆ ಪಶ್ಚಿಮ ಬಂಗಾಳದಲ್ಲೂ ನಡೆದಿತ್ತು.

ಅಲ್ಲಿ ಕರಡು ಮತದಾರರ ಪಟ್ಟಿಯಿಂದ ಒಟ್ಟು 58 ಲಕ್ಷ ಹೆಸರುಗಳನ್ನು ಅಳಿಸಲಾಗಿತ್ತು. ಈ ಪೈಕಿ 24 ಲಕ್ಷ ಮಂದಿ ಮೃತರಾಗಿದ್ದರೆ, 19 ಲಕ್ಷ ಹೆಸರುಗಳನ್ನು 'ಸ್ಥಳಾಂತರಗೊಂಡವರು' ಎಂದು ಗುರುತಿಸಲಾಗಿತ್ತು. 12 ಲಕ್ಷ ಮಂದಿ 'ಕಾಣೆಯಾಗಿದ್ದಾರೆ' ಎಂದು ದಾಖಲಿಸಲಾಗಿದ್ದು, ಸುಮಾರು 1.3 ಲಕ್ಷ ಪ್ರಕರಣಗಳು ನಕಲಿ ನೋಂದಣಿಗಳಾಗಿವೆ. ಇದು ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಪರಿಶೀಲಿಸುವ ಪ್ರಕ್ರಿಯೆಯಾಗಿದ್ದು, ಅರ್ಹ ಹೊಸ ಮತದಾರರನ್ನು ಸೇರಿಸುವುದು ಹಾಗೂ ಅನರ್ಹ ಅಥವಾ ಅಸತ್ಯ ಮಾಹಿತಿಯಿರುವ ಹೆಸರುಗಳನ್ನು ತೆಗೆದುಹಾಕುವುದನ್ನು ಒಳಗೊಂಡಿರುತ್ತದೆ.

# ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ

**ವಿಜಯನಗರ** : ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ವಿಜಯನಗರ ಜಿಲ್ಲೆಗೆ ಆಗಮಿಸಲಿದ್ದಾರೆ. ಎರಡು ದಿನಗಳ ಈ ಪ್ರವಾಸದ ವೇಳೆ ಹೊಸಪೇಟೆ, ಹಂಪಿ ಹಾಗೂ ಕಮಲಾಪುರ ಪ್ರದೇಶಗಳಲ್ಲಿ ಹಲವು ಅಭಿವೃದ್ಧಿ, ಸಾಂಸ್ಕೃತಿಕ ಮತ್ತು ಆರೋಗ್ಯ ಸಂಬಂಧಿತ ಕಾರ್ಯಕ್ರಮಗಳಲ್ಲಿ ಅವರು ಭಾಗವಹಿಸಲಿದ್ದಾರೆ.



ಹೊಸಪೇಟೆ ನಗರದ ಅಮರಾವತಿ ಸರ್ಕಾರಿ ಬಾಲಕಿಯರ ಪಿಯು ಕಾಲೇಜಿನಲ್ಲಿ 'ವಿಜಯಪಥ್ AI ಪ್ರಾಜೆಕ್ಟ್' ಗೆ ಕೇಂದ್ರ ಸಚಿವೆ ಅಧಿಕೃತ ಚಾಲನೆ ನೀಡಲಿದ್ದಾರೆ. ಈ ಯೋಜನೆಯ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಅಳವಡಿಸುವ ಮಹತ್ವದ ಹೆಜ್ಜೆ ಇಡಲಾಗುತ್ತಿದೆ. ವಿ ಜಯಪಥ್ ಪ್ರಾಜೆಕ್ಟ್‌ಗೆ ಚಾಲನೆ ನೀಡಿದ ನಂತರ ಬೆಳಗ್ಗೆ 11:30ಕ್ಕೆ ಹೊಸಪೇಟೆಯ ವಿಜಯಶ್ರೀ ಹೆರಿಟೇಜ್‌ನಲ್ಲಿ ಆಯೋಜಿಸಿರುವ ಚಿಂತನಾ ಶಿಬಿರದಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಭಾಗವಹಿಸಲಿದ್ದಾರೆ.

ಈ ಶಿಬಿರದಲ್ಲಿ ಅಭಿವೃದ್ಧಿ, ಆಡಳಿತ ಸುಧಾರಣೆ, ಆರ್ಥಿಕತೆ ಹಾಗೂ ಸ್ಥಳೀಯ ಸಮಸ್ಯೆಗಳ ಕುರಿತು ಚರ್ಚೆ ನಡೆಯಲಿದೆ. ರಾಜ್ಯ ಮತ್ತು ಕೇಂದ್ರದ ವಿವಿಧ ಮಟ್ಟದ ನಾಯಕರು, ಅಧಿಕಾರಿಗಳು ಹಾಗೂ ಚಿಂತಕರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಸಂಜೆಯ ಕಾರ್ಯಕ್ರಮವಾಗಿ ವಿಶ್ವವಿಖ್ಯಾತ ಪ್ರವಾಸಿ ತಾಣ ಹಂಪಿಯಲ್ಲಿ ನಡೆಯಲಿರುವ ಧ್ವನಿ ಮತ್ತು ಬೆಳಕು ಪ್ರದರ್ಶನವನ್ನು ಕೇಂದ್ರ ಸಚಿವೆ ವೀಕ್ಷಿಸಲಿದ್ದಾರೆ.. ಧ್ವನಿ-ಬೆಳಕು ಪ್ರದರ್ಶನದ ಬಳಿಕ ಸಚಿವೆ ಹಂಪಿಯಲ್ಲೇ ವಾಸ್ತವ್ಯ ಹೂಡಲಿದ್ದಾರೆ. ಗಂಟೆಗೆ ಕಮಲಾಪುರದ ಹವಾಮಾನ ಕಚೇರಿ ಆವರಣದಲ್ಲಿ ಆಯೋಜಿಸಿರುವ ಸಸಿ ನೆಡುವ ಅಭಿಯಾನಕ್ಕೆ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಚಾಲನೆ ನೀಡಲಿದ್ದಾರೆ. ಪರಿಸರ ಸಂರಕ್ಷಣೆ, ಹಸಿರು ಕ್ರಾಂತಿ ಮತ್ತು ಹವಾಮಾನ ಬದಲಾವಣೆ ವಿರುದ್ಧದ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ನೀಡಲಿದ್ದಾರೆ. ಮಕ್ಕಳ ಆರೋಗ್ಯ ಮತ್ತು ಪೋಲಿಯೋ ನಿರ್ಮೂಲನೆಯ ಸಂಕಲ್ಪವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

## ಎಚ್.ಕೆ. ಪಾಟೀಲ್ ಹತ್ಯೆ ಬೆದರಿಕೆ ಪ್ರಕರಣ; AK-47 ಉಲ್ಲೇಖಿಸಿ ಭೂಪ ಅಂದರ್ ಬೆದರಿಕೆ



**ಗದಗ:** ಇತ್ತೀಚಿಗೆ ಸರ್ಕಾರಿ ಕಚೇರಿಗಳಿಗೆ ಬಾಂಬ್ ಬೆದರಿಕೆಯ ಕರೆಗಳು, ಇ-ಮೇಲ್‌ಗಳು ಹೆಚ್ಚುತ್ತಿರುವ ಸಂದರ್ಭ ದಲ್ಲಿಯೇ ಕರ್ನಾಟಕದ ಕಾನೂನು ಸಚಿವ ಸಚಿವ ಎಚ್.ಕೆ. ಪಾಟೀಲ್‌ಗೆ (H K Patil) ಫೇಸ್‌ಬುಕ್ ನಲ್ಲಿ ಜೀವ ಬೆದರಿಕೆ ಹಾಕಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಬಂಧಿಸಲಾಗಿದೆ. ಸಚಿವರಿಗೆ ಅವಹೇಳನಕಾರಿ ಪದಗಳಿಂದ ನಿಂದನೆ ಕೆಲ ದಿನಗಳ ಹಿಂದೆಯಷ್ಟೇ ಮಂಗಳೂರು, ಗದಗ ಸೇರಿದಂತೆ ಹಲವೆಡೆ ಸರ್ಕಾರಿ ಕಚೇರಿಗಳಿಗೆ ಬಾಂಬ್ ಬೆದರಿಕೆಯ ಇ-ಮೇಲ್‌ಗಳು ಬಂದಿದ್ದವು. ಈ ನಡುವೆ ಕಾನೂನು ಸಚಿವ ಎಚ್.ಕೆ. ಪಾಟೀಲ್‌ಗೆ ಸಾಮಾಜಿಕ ಜಾಲತಾಣ ಫೇಸ್‌ಬುಕ್‌ನಲ್ಲಿ ಜೀವ ಬೆದರಿಕೆ ಹಾಕಿದ್ದು, ಎಲ್ಲೆಡೆ ಸಂಚಲನ ಮೂಡಿಸಿದೆ. ವೀರಣ್ಣ ಬೀಳಗಿ ಎಂಬಾತ ಪ್ರಚೋದನಕಾರಿ ಪೋಸ್ಟ್ ಹಾಕಿದ್ದು, ಸಚಿವರನ್ನು ಅವಹೇಳನಕಾರಿ ಪದಗಳಿಂದ ಕರೆಯುವ ಜೊತೆಗೆ ಸಚಿವರನ್ನು ನಿಲ್ಲಿಸಿ AK-47 ನಿಂದ ಗುಂಡಿನ ಮಳೆಗರೆಯಬೇಕು ಎಂದಿದ್ದ. ಸಾರ್ವಜನಿಕ ಸ್ಥಳದಲ್ಲಿ ಹಾನಿ ಮಾಡುವ ಬೆದರಿಕೆ ನೀಡಿದ್ದ. ಈ ವಿಚಾರ ಬೆಳಕಿಗೆ ಬಂದ ತಕ್ಷಣ ಕಾಂಗ್ರೆಸ್ ಮುಖಂಡ ಬಿ.ಬಿ. ಅಸೂಟಿ ಅವರು ಗದಗ ನಗರದ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ದೂರಿನ ಆಧಾರದಲ್ಲಿ ಪೊಲೀಸರು ತ್ವರಿತವಾಗಿ ತನಿಖೆ ನಡೆಸಿ, ಡಿಸೆಂಬರ್ 14ರಂದು ರೋಣ ತಾಲೂಕಿನ ಸೂಡಿ ಗ್ರಾಮದ ನಿವಾಸಿ ವೀರಣ್ಣ ಬೀಳಗಿಯನ್ನು ಬಂಧಿಸಿದ್ದಾರೆ.

ಸೋಶಿಯಲ್ ಮೀಡಿಯಾದಲ್ಲಿ ಬೆದರಿಕೆ ಹಾಕುವವರ ವಿರುದ್ಧ ಕ್ರಮ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಹಾಗೂ ಬೆದರಿಕೆ ಉಂಟುಮಾಡುವ ಪೋಸ್ಟ್‌ಗಳಿಗೆ ಕಾನೂನು ಕ್ರಮ ಅನಿವಾರ್ಯವೆಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಇಂತಹ ಪೋಸ್ಟ್‌ಗಳು ಸಾರ್ವಜನಿಕ ಶಾಂತಿ ಹಾಗೂ ಭದ್ರತೆಗೆ ಧಕ್ಕೆಯಾಗುತ್ತವೆ ಎಂದು ತಿಳಿಸಿರುವ ಪೊಲೀಸರು, ಪ್ರಕರಣಕ್ಕೆ ಸಂಬಂಧಿಸಿದಂತೆ ಮುಂದಿನ ತನಿಖೆ ಮುಂದುವರಿದಿದೆ ಎಂದು ಮಾಹಿತಿ ನೀಡಿದ್ದಾರೆ.

## ಸಿಎಂ, ನನ್ನನ್ನು ಸೂಕ್ತ ಸಮಯದಲ್ಲಿ ಕರೆಯುವುದಾಗಿ ಹೈಕಮಾಂಡ್ ತಿಳಿಸಿದೆ: ಡಿಕೆಶಿ



ಬೆಂಗಳೂರು: ನಮ್ಮ ಹೈಕಮಾಂಡ್ ನಾಯಕರು ಸಿಎಂ ಮತ್ತು ನನಗೆ ಇಬ್ಬರಿಗೂ ಏನೋ ಹೇಳಿದ್ದಾರೆ. ಸೂಕ್ತ ಸಮಯದಲ್ಲಿ ಕರೆಸುತ್ತೇವೆ ಎಂದೂ ಇಬ್ಬರಿಗೂ ಹೇಳಿದ್ದಾರೆ. ಆಗ ಇಬ್ಬರೂ ದಿಲ್ಲಿಗೆ ಹೋಗುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಸದಾಶಿವನಗರ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ಇ.ಡಿ ಹಾಕಿದ್ದ ಚಾರ್ಜ್‌ಶೀಟ್ ಕೋರ್ಟ್‌ನಲ್ಲಿ ತಿರಸ್ಕೃತಗೊಂಡಿದ್ದು, ಈಗ ಒಂದು ಎಫ್‌ಐಆರ್ ಬಾಕಿ ಉಳಿದುಕೊಂಡಿದೆ.

ನಮ್ಮ ಮೇಲೆ ಯಾವ ರೀತಿ ದಬ್ಬಾಳಿಕೆ ನಡೆಯುತ್ತಿದೆ ಎಂದು ತಿಳಿಸಲು ನಾವು ಪ್ರತಿಭಟನೆ ನಡೆಸುತ್ತಿದ್ದೇವೆ ಎಂದರು. ವಿಧಾನ ಮಂಡಲ ಅಧಿವೇಶನದ ಬಳಿಕ ನೀವು ಮತ್ತು ಸಿಎಂ ದೆಹಲಿಗೆ ಹೋಗಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುವ ಎಂದು ಚರ್ಚೆ ಇದೆಯಲ್ಲ ಎಂದು ಕೇಳಿದಾಗ, ಆ ರೀತಿ ಇದ್ದರೆ ನಿಮಗೂ ತಿಳಿಸುತ್ತೇವೆ. ನಿಮಗೆ ತಿಳಿಸದೇ ಏನೂ ಮಾಡುವುದಿಲ್ಲ. ನಾನು ಕದ್ದುಮುಚ್ಚಿ ಹೋಗುವುದಿಲ್ಲ ಎಂದು ಹೇಳಿದರು. ನಾನು ಮಂಗಳವಾರ ದೆಹಲಿಗೆ ಹೋಗುತ್ತಿದ್ದು, ಆಗ ದೆಹಲಿ ಪೊಲೀಸರನ್ನು ಭೇಟಿ ಮಾಡುವೆ. ಅಂದು ಕೇಂದ್ರ ಜಲಶಕ್ತಿ ಸಚಿವರು ನದಿ ಜೋಡಣೆ ವಿಚಾರವಾಗಿ ಸಭೆ ಕರೆದಿದ್ದಾರೆ. ಅಂದು ನಮ್ಮ ರಾಜ್ಯದ ಪ್ರಮುಖ ಯೋಜನೆಗಳಾದ ಮಹದಾಯಿ, ಕೃಷ್ಣ ಮೇಲ್ದಂಡೆ, ಮೇಕೆದಾಟು, ಭದ್ರಾ ಮೇಲ್ದಂಡೆ ಯೋಜನೆ ವಿಚಾರವಾಗಿ ಚರ್ಚೆ ಮಾಡುವೆ.

ಇದೇ ವೇಳೆ ಕೇಂದ್ರ ಅರಣ್ಯ ಸಚಿವರು, ನಗರಾಭಿವೃದ್ಧಿ ಸಚಿವರನ್ನು ಭೇಟಿ ಮಾಡಲು ಸಮಯ ಕೇಳಿರುವೆ. ರಾಜ್ಯದ ಹಿತಾಸಕ್ತಿ ವಿಚಾರವಾಗಿ ನಾನು ಅವರನ್ನು ಭೇಟಿ ಮಾಡಲು ತೀರ್ಮಾನಿಸಿರುವೆ. ರಾಜ್ಯದ ಸಂಸದರ ಜೊತೆಗೆ ಭೇಟಿಯಾಗುವ ಆಲೋಚನೆ ಇತ್ತು. ಇವೆಲ್ಲ ಆದ ನಂತರ ಅವರು ಬಂದರೆ ಪ್ರಧಾನ ಮಂತ್ರಿಗಳನ್ನೂ ಭೇಟಿ ಮಾಡುವೆ ಎಂದು ತಿಳಿಸಿದರು. ನಾಗಸಾಧುಗಳು ಆಶೀರ್ವಾದ ಮಾಡಿರುವ ಬಗ್ಗೆ ಕೇಳಿದಾಗ, ಅವರು ಮನೆಗೆ ಹುಡುಕಿಕೊಂಡು ಬಂದು ಆಶೀರ್ವಾದ ಮಾಡಿದ್ದಾರೆ.

ಮನೆಗೆ ಬಂದವರನ್ನು ಬೇಡ ಎನ್ನಲು ಆಗುವುದಿಲ್ಲ. ರಾಜಕೀಯದಲ್ಲಿರುವ ಕಾರಣ ನಮಗೆ ಸಾಧು-ಸಂತರು, ಸ್ವಾಮೀಜಿಗಳು, ಹಿರಿಯರು ಸೇರಿದಂತೆ ಎಲ್ಲಾ ರೀತಿಯ ಜನರೂ ನಮಗೆ ಬೇಕು. ನಮ್ಮ ಸರ್ಕಾರ ಧಾರ್ಮಿಕ ದತ್ತಿ ಇಲಾಖೆ ನಡೆಸುತ್ತಿದೆ. ವಕ್ಫ್, ಚರ್ಚ್ ಸೇರಿದಂತೆ ಎಲ್ಲಾ ಧಾರ್ಮಿಕ ಕೇಂದ್ರಗಳಿಗೂ ಸಹಾಯ ಮಾಡಲಾಗುತ್ತಿದೆ ಎಂದರು.

## ನುಸುಳುಕೋರರ ರಕ್ಷಣೆಗೆ ಎಸ್‌ಐಆರ್‌ಗೆ ವಿರೋಧ; ಮಮತಾ ಸರ್ಕಾರದ ಮೇಲೆ ಪ್ರಧಾನಿ ಮೋದಿ ಆರೋಪ



**ಕೊಲ್ಕತ್ತಾ:**ಪ್ರಧಾನಿ ನರೇಂದ್ರ ಮೋದಿ ಇಂದು (ಶನಿವಾರ) ತೃಣಮೂಲ ಕಾಂಗ್ರೆಸ್ (ಟಿಎಂಸಿ) ನೇತೃತ್ವದ ಪಶ್ಚಿಮ ಬಂಗಾಳ ಸರ್ಕಾರದ ಮೇಲೆ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಆಡಳಿತವು ನುಸುಳು ಕೋರರನ್ನು ರಕ್ಷಿಸಲು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅನ್ನು ವಿರೋಧಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ನಾಡಿಯಾ ಜಿಲ್ಲೆಯ ತಾಹೆರ್‌ಪುರದಲ್ಲಿ ದೂರವಾಣಿ ಮೂಲಕ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಪಿಎಂ ಮೋದಿ, ನುಸು ಳುಕೋರರು ಬಂಗಾಳದಲ್ಲಿ ಟಿಎಂಸಿಯ ಬೆಂಬಲವನ್ನು ಪಡೆದಿದ್ದಾರೆ ಎಂದು ಹೇಳಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯು ಟಿಎಂಸಿಯ 'ಮಹಾ ಜಂಗಲ್ ರಾಜ್' ಅನ್ನು ಕೊನೆಗೊಳಿಸಲಿದೆ ಎಂದು ಪ್ರತಿಪಾದಿಸಿದ ಪ್ರಧಾನಿ ಮೋದಿ, ಬಂಗಾಳದಲ್ಲಿ ಭ್ರಷ್ಟಾಚಾರ, ಸ್ವಜನಪಕ್ಷಪಾತ ಮತ್ತು ಓಲೈಕೆಯ ರಾಜಕೀಯ ಆಳ್ವಿಕೆ ನಡೆಸುತ್ತಿದೆ ಎಂದು ಹೇಳಿದ್ದಾರೆ. ಟಿಎಂಸಿ ಬಿಜೆಪಿಯನ್ನು ವಿರೋಧಿಸಬಹುದು.

ಆದರೆ ಬಿಹಾರದ ಚುನಾವಣಾ ಫಲಿತಾಂಶಗಳು ಪಶ್ಚಿಮ ಬಂಗಾಳದಲ್ಲಿ ಬಿಜೆಪಿಗೆ ಬಾಗಿಲು ತೆರೆದಿವೆ ಎಂದು ಅವರು ಹೇಳಿದ್ದಾರೆ. ಬಿಹಾರವು ಬಂಗಾಳದಲ್ಲಿ ಬಿಜೆಪಿಯ ಗೆಲುವಿಗೆ ದಾರಿ ಮಾಡಿಕೊಟ್ಟಿದೆ. ಬಿಹಾರದ ಜಂಗಲ್ ರಾಜ್ ಅನ್ನು ತೊಡೆದುಹಾಕಲಾಯಿತು. ಈಗ ನಾವು ಪಶ್ಚಿಮ ಬಂಗಾಳದಲ್ಲಿ 'ಮಹಾ ಜಂಗಲ್ ರಾಜ್' ಅನ್ನು ತೊಡೆದುಹಾಕಬೇಕಿದೆ" ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಕೆಟ್ಟಹವಾಮಾನದಿಂದಾಗಿ ನಾಡಿಯಾವನ್ನು ತಲು ಪಲು ಸಾಧ್ಯವಾಗದಿದ್ದಕ್ಕಾಗಿ ಕ್ಷಮೆ ಯಾಚಿಸಿದ ಪ್ರಧಾನಿ ಮೋದಿ, ಬಿಜೆಪಿ ಯಾವುದೇ ಬೆಲೆ ತೆತ್ತಾದರೂ ಪಶ್ಚಿಮ ಬಂಗಾಳದ ಅಭಿವೃದ್ಧಿಯನ್ನು ಮಾಡುತ್ತದೆ ಎಂದು ಹೇಳಿದರು. ಮುಂದಿನ ವರ್ಷ ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಗೆ ಮತ ಹಾಕುವಂತೆ ಜನರಿಗೆ ಮನವಿ ಮಾಡಿದ ಅವರು ಬಂಗಾಳಕ್ಕೆ ಅದರಲ್ಲೂ ವಿಶೇಷವಾಗಿ ಹಿಂದುಳಿದಿರುವ ಪ್ರದೇಶಗಳಿಗೆ ಸಂಪರ್ಕವನ್ನು ಒದಗಿಸಲು ಬಿಜೆಪಿ ಬಯಸುತ್ತದೆ ಎಂದು ಹೇಳಿದ್ದಾರೆ.


ಇದಕ್ಕೂ ಮೊದಲು, ಪಶ್ಚಿಮ ಬಂಗಾಳದ ನಾಡಿಯಾ ಜಿಲ್ಲೆಯ ರಣಘಾಟ್‌ನಲ್ಲಿ ಪ್ರಧಾನಿ ಮೋದಿ ಬಹು ಅಭಿವೃದ್ಧಿ ಕಾರ್ಯಗಳಿಗೆ ಉದ್ಘಾಟನೆ ಮತ್ತು ಶಂಕು ಸ್ಥಾಪನೆ ನೆರವೇರಿಸಿದರು. ಇದರಲ್ಲಿ ಸುಮಾರು 3,200 ಕೋಟಿ ರೂ. ಮೌಲ್ಯದ ಎರಡು ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಕೂಡ ಸೇರಿವೆ.

ಇದರಲ್ಲಿ NH-34 ರ 66.7 ಕಿಮೀ ಉದ್ದದ ಬಾರಾಜಗುಳಿ-ಕೃಷ್ಣನಗರ ವಿಭಾಗದ 4 ಪಥ ನಿರ್ಮಾಣ ಯೋಜನೆಯೂ ಒಂದು. 17.6 ಕಿಮೀ ಉದ್ದದ ಬಾರಾಜಸತ್-ಬಾರಾಜಗುಳಿ ವಿಭಾಗದ 4 ಪಥ ನಿರ್ಮಾಣಕ್ಕೂ ಅವರು ಶಂಕು ಸ್ಥಾಪನೆ ನೆರವೇರಿಸಿದರು. ಈ ಯೋಜನೆಗಳು ಕೋಲ್ಕತ್ತಾವನ್ನು ಸಿಲಿಗುರಿಯೊಂದಿಗೆ ಸಂಪರ್ಕಿಸಲು ಸಹಾಯ ಮಾಡುತ್ತದೆ ಮತ್ತು ಜನರ ಪ್ರಯಾಣದ ಸಮಯವನ್ನು ಸುಮಾರು 2 ಗಂಟೆಗಳ ಕಾಲ ಕಡಿಮೆ ಮಾಡುತ್ತದೆ. ಈ ಯೋಜನೆಗಳು ಈ ಪ್ರದೇಶದಲ್ಲಿ ಆರ್ಥಿಕ ಚಟುವಟಿಕೆಗಳನ್ನು ಸುಧಾರಿಸಲು ಮತ್ತು ಪ್ರವಾಸೋದ್ಯಮವನ್ನು ಉತ್ತೇಜಿಸಲು ಸಹಾಯ ಮಾಡುತ್ತವೆ.

## `ನಿಗೂಢ ರಕ್ತ' ಪ್ರಕರಣದ ರಹಸ್ಯ ಬಯಲು

**ಮಂಡ್ಯ:** ನಗರದ ಮನೆಯೊಂದರಲ್ಲಿ ನಿಗೂಢವಾಗಿ ರಕ್ತ ಪತ್ತೆಯಾಗಿತ್ತು. ಏಕಾಏಕಿ ಮನೆ ತುಂಬೆಲ್ಲ ನೆತ್ತರು ಕಂಡು ಜನ ಅಕ್ಷರಶಃ ಬೆಚ್ಚಿಬಿದ್ದಿದ್ರು. ಯಾರೋ ವಾಮಾಚಾರ ಮಾಡಿ ಪ್ರಾಣಿಯ ರಕ್ತ ಸುರಿದಿದ್ದಾರೆ ಅಂತ ಗ್ರಾಮಸ್ಥರು ಶಂಕಿಸಿದ್ರು. ಆದ್ರೆ ಪೊಲೀಸ್ ತನಿಖೆಯಲ್ಲಿ ಭಯಾನಕರ ಅಂಶ ಬಯಲಾಗಿದ್ದು, ಅದು ಯಾವುದೊ ಪ್ರಾಣಿ ಅಥವಾ ಪಕ್ಷಿಯ ರಕ್ತವಲ್ಲ, ಮನುಷ್ಯನ ರಕ್ತ ಅದು ಸಹ ಮನೆಯ ಮಾಲೀಕನದ್ದೇ ಎಂಬುದು ಗೊತ್ತಾಗಿದೆ.

ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಹೊಂಬಾಳೆಗೌಡನ ದೊಡ್ಡಿ ಗ್ರಾಮದ ಸತೀಶ್, ಸೌಮ್ಯ ದಂಪತಿಯ ಮನೆಯಲ್ಲಿ ಕಳೆದ ಅಕ್ಟೋಬರ್ 28 ರಂದು ಬೆಳಿಗ್ಗೆ ನಿಗೂಢವಾಗಿ ರಕ್ತ ಕಾಣಿಸಿಕೊಂಡಿತ್ತು. ಹಾಲ್, ಬಾತ್ ರೂಮ್ ಸೇರಿದಂತೆ ಮನೆಯ ಹಲವೆಡೆ ನೆತ್ತರು ಚೆಲ್ಲಿತ್ತು. ಗೋಡೆ, ಟಿವಿ, ಫ್ಯಾನ್ ಮೇಲೂ ರಕ್ತದ ಕಲೆ ಅಂಟಿತ್ತು. ಇದನ್ನ ನೋಡಿದ ಮನೆಯವರು ನಡುಕ ಹುಟ್ಟಿತ್ತು. ಅಷ್ಟೆಯಲ್ಲ ಗ್ರಾಮಸ್ಥರೂ ಬೆಚ್ಚಿಬಿದ್ದಿದ್ರು.



ಯಾರೊ ವಾಮಾಚಾರ ಮಾಡಿ ಪ್ರಾಣಿಯ ಬಲಿಕೊಟ್ಟು ಬಳಿಕ ರಕ್ತವನ್ನ ಮನೆಗೆ ತಂದು ಯಾರಿಗೂ ಗೊತ್ತಾಗದಂತೆ ಸುರಿದು ಪರಾರಿಯಾಗಿರಬಹುದು ಅಂತ ಊರಿನವರು ಶಂಕಿಸಿದ್ರು. ಆದ್ರೆ, ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಅದು ಪ್ರಾಣಿಯ ನೆತ್ತರಲ್ಲ, ಬದಲಿಗೆ ಮನುಷ್ಯನ ರಕ್ತ ಅದ್ರಲ್ಲೂ ಮನೆಯ ಮಾಲೀಕ ಸತೀಶ್‌ನದ್ದೆ ಎಂದು ಗೊತ್ತಾಗಿದೆ. ಅಂದಹಾಗೇ ಸತೀಶ್, ಸೌಮ್ಯ ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಅವ್ರು ಹಾಸ್ಟೆಲ್ ನಲ್ಲಿತ್ತುಕೊಂಡು ವಿದ್ಯಾಭ್ಯಾಸ ಮಾಡುತ್ತಿರೋದ್ರಿಂದ ಮನೆಯಲ್ಲಿ ದಂಪತಿ ಮಾತ್ರ ಇದ್ದಾರೆ.

ಸೌಮ್ಯ ಬೆಳಿಗ್ಗೆ ಬೇಗ ಎದ್ದು ಮನೆ ಕಸ ಗುಡಿಸಿ, ಒರೆಸಿ ಸ್ವಚ್ಛಗೊಳಸಿ ಹಾಗತಾನೆ ಕುಳಿತುಕೊಂಡಿದ್ರು. ಅಷ್ಟರಲ್ಲಿ ಜಮೀನಿನಿಂದ ಗಂಡನಿಗೆ ಉಪಹಾರ ಸಿದ್ದಪಡಿಸಲು ಅಡುಗೆ ಕೋಣೆಗೆ ತೆರಳಿದ್ರು. ಇತ್ತ ಸತೀಶ್ ಕೈಕಾಲು ತೊಳೆಯಲು ಬಾತ್ ರೂಮ್‌ಗೆ ಹೋದಾಗ ಅಲ್ಲಿ ರಕ್ತ ಕಂಡು ಗಾಬರಿಯಾಗಿದ್ದಾರೆ.

ಅಷ್ಟರಲ್ಲಿ ಮನೆಯ ಹಾಲ್, ಟಿವಿ, ಫ್ಯಾನ್ ಮೇಲೆಲ್ಲ ರಕ್ತ ಅಂಟಿತ್ತು ಇನ್ನೂ ಮಾಹಿತಿ ತಿಳಿದ ತಕ್ಷಣ ಸ್ಥಳಕ್ಕೆ ಪೊಲೀಸರು ಆಗಮಿಸಿದ್ರು. ತಕ್ಷಣ FSL ಹಾಗೂ ಶ್ವಾನದಳದ ಸಿಬ್ಬಂದಿ ಕರೆಸಿ ಪರಿಶೀಲನೆ ನಡೆಸಿದ್ರು. ಸದ್ಯ ರಕ್ತದ ಮಾದರಿ ರಿಪೋರ್ಟ್ ಬಂದಿದೆ.

ಈ ರಿಪೋರ್ಟ್‌ನಲ್ಲಿ ಮನೆಯಲ್ಲಿ ಸಿಕ್ಕಿದ ರಕ್ತ ಯಾವುದೊ ಪ್ರಾಣಿ ಅಥವಾ ಪಕ್ಷಿಯ ರಕ್ತವಲ್ಲ. ಅದು ಮನೆ ಮಲೀಕ ಸತೀಶ್‌ನದ್ದು ಎಂದು ತಿಳಿದು ಬಂದಿದೆ. ಇದೀಗ ಸತೀಶ್‌ನನ್ನು ವಿಚಾರಣೆ ಮಾಡಿದಾಗ ಸತೀಶ್ ಕಾಲಿನಿಂದಲೇ ಮನೆ ಎಲ್ಲಾ ರಕ್ತವರಡಿದೆ ಎಂದು ಗೊತ್ತಾಗಿದೆ. ಒಟ್ಟಾರೆ ಮನೆಯಲ್ಲಿ ನಿಗೂಢವಾಗಿ ರಕ್ತ ಹರಡಿದೆ ಎಂದು ಊರಿನ ಜನರಲ್ಲಿ ಗಾಬರಿ ಉಂಟುಮಾಡಿದ್ದ ದಂಪತಿಗೆ ಇದೀಗ ಸತ್ಯದ ಅರಿವಾಗಿದೆ. ಇದ್ಯಾವುದೋ ರಕ್ತವಲ್ಲ ಮನೆಯ ಮಾಲೀಕನ ರಕ್ತ ಎಂದು ತಿಳಿದು ನಿಟ್ಟುಸಿರು ಬಿಟ್ಟಿದ್ದಾರೆ.

## ಸೈಬರ್ ವಂಚನೆ ಜಗತ್ತಿಗೆ ಶಾಕ್; ವಂಚಕನ ಖಾತೆಯಲ್ಲಿ 1000 ಕೋಟಿ ರೂ. ವ್ಯವಹಾರ

**ದಾವಣಗೆರೆ:** ಪೊಲೀಸರು ಬಯಲಿಗೆಳೆದಿದ್ದ ಸೈಬರ್ ವಂಚನೆ ಪ್ರಕರಣವೊಂದು ಇದೀಗ ರಾಜ್ಯದಲ್ಲೇ ಅತಿದೊಡ್ಡ ಸೈಬರ್ ಅಪರಾಧ (Cyber Crime) ಪ್ರಕರಣಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಆರಂಭದಲ್ಲಿ ಕೇವಲ 150 ಕೋಟಿ ರೂಪಾಯಿ ವಹಿವಾಟು ನಡೆದಿದೆ ಎಂದು ಅಂದಾಜಿಸಲಾಗಿದ್ದ ಈ ಪ್ರಕರಣದಲ್ಲಿ, ಇದೀಗ 1,000 ಕೋಟಿ ರೂಪಾಯಿಗೂ ಅಧಿಕ ಹಣ ವಹಿವಾಟು ನಡೆದಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ.

ಪ್ರಕರಣದ ಗಂಭೀರತೆಯನ್ನು ಗಮನಿಸಿ ದಾವಣಗೆರೆ ಎಸ್‌ಪಿ ಉಮಾ ಪ್ರಶಾಂತ್ ಅವರು ಈ ಕೇಸ್ ಅನ್ನು ಸಿಐಡಿಗೆ ಹಸ್ತಾಂತರಿಸಿದ್ದಾರೆ. ಕಳೆದ ಎರಡು ತಿಂಗಳ ಹಿಂದೆ ದಾವಣಗೆರೆ ಸೈಬರ್ ಪೊಲೀಸ್ ಠಾಣೆಯಲ್ಲಿ ಪ್ರಮೋದ್ ಎಂಬ ವ್ಯಕ್ತಿ ದೂರು ದಾಖಲಿಸಿದ್ದರು. ಕನ್‌ಸ್ಟ್ರಕ್ಷನ್ ಉದ್ಯಮ ನಡೆಸುತ್ತಿದ್ದ ಪ್ರಮೋದ್, ತನ್ನ ಬ್ಯಾಂಕ್ ಖಾತೆಯಿಂದ 52 ಲಕ್ಷ ರೂಪಾಯಿ ಹಣ ಕಳೆದುಕೊಂಡಿರುವುದಾಗಿ ಪೊಲೀಸರಿಗೆ ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ತನಿಖೆ ಆರಂಭಿಸಿದ ಪೊಲೀಸರು, ಪ್ರಮೋದ್ ಖಾತೆಯಿಂದಲೇ 150 ಕೋಟಿ ರೂಪಾಯಿ ವರ್ಗಾವಣೆ ಆಗಿರುವುದು ಪತ್ತೆಹಚ್ಚಿದರು.


ಆರಂಭದಲ್ಲಿ ಹಣ ಕಳೆದುಕೊಂಡ ವ್ಯಕ್ತಿಯಾಗಿದ್ದ, ಅಂದರೆ ಸಂತ್ರಸ್ತನಾಗಿದ್ದ ಪ್ರಮೋದ್, ತನಿಖೆ ಮುಂದುವರಿದಂತೆ ಪ್ರಕರಣದ ಪ್ರಮುಖ ಆರೋಪಿಯಾಗಿ ಗುರುತಿಸಲ್ಪಟ್ಟರು. ಪೊಲೀಸರು ಆತನನ್ನು ತೀವ್ರವಾಗಿ ವಿಚಾರಣೆ ನಡೆಸಿದಾಗ, ಆತನ ಖಾತೆಗೆ ಜಮೆಯಾಗಿದ್ದ ಹಣವೇ ಅನಾಮಧೇಯ ಮೂಲಗಳಿಂದ ಬಂದಿರುವುದು ಬೆಳಕಿಗೆ ಬಂದಿದೆ. ತನಿಖೆ ವೇಳೆ ಯಾವುದೇ ಉದ್ಯಮ ಇಲ್ಲದಿದ್ದರೂ ಕರೆಂಟ್ ಅಕೌಂಟ್ ತೆರದು, ಅದನ್ನು ಬೇರೆಯವರಿಗೆ ಮಾರಾಟ ಮಾಡುತ್ತಿರುವ ದೊಡ್ಡ ಜಾಲ ಬಯಲಾಗಿದೆ. ದುಬೈ ಸೇರಿದಂತೆ ವಿದೇಶಗಳಿಂದ ಕೋಟಿ ರೂಪಾಯಿ ಹಣ ಜಮೆಯಾಗುತ್ತಿತ್ತು. ಆನ್‌ಲೈನ್ ಗೇಮಿಂಗ್, ಗ್ಯಾಂಬ್ಲಿಂಗ್, ಫೇಕ್ ಟ್ರೇಡಿಂಗ್ ಸೇರಿದಂತೆ ಹಲವು ಅಕ್ರಮ ಚಟುವಟಿಕೆಗಳಿಂದ ಈ ಹಣ ಹರಿದುಬರುತ್ತಿದ್ದ ಮಾಹಿತಿ ಸಿಕ್ಕಿದೆ.

ಪ್ರಮೋದ್ ತನ್ನ ಕರೆಂಟ್ ಅಕೌಂಟ್ ಅನ್ನು ಇತರರಿಗೆ ಬಳಕೆಗೆ ನೀಡಿದ್ದು, ಅದಕ್ಕಾಗಿ ಕಮಿಷನ್ ಪಡೆಯುತ್ತಿದ್ದ ಎನ್ನಲಾಗಿದೆ. ಆದರೆ ಜಮೆಯಾದ ಹಣಕ್ಕೆ ಕಮಿಷನ್ ನೀಡಿಲ್ಲ ಎಂದು ಆರೋಪಿಸಿ, ವಂಚಕರು ತನ್ನ ಖಾತೆಯಲ್ಲಿದ್ದ ಹಣ ಕದ್ದಿದ್ದಾರೆ ಎಂದು ಪ್ರಮೋದ್ ದೂರು ನೀಡಿದ್ದುದೂ ತನಿಖೆಯಲ್ಲಿ ಗೊತ್ತಾಗಿದೆ.

ಪ್ರಕರಣ ಸಂಬಂಧ ಹಾಸನ ಜಿಲ್ಲೆಯ ಬೇಲೂರು ಮೂಲದ ಅರ್ಫಾತ್ ಪಾಷಾ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಅರ್ಫಾತ್ ಖಾತೆಯಲ್ಲಿ ಇದ್ದ 18 ಕೋಟಿ ರೂಪಾಯಿಯನ್ನು ಪೊಲೀಸರು ಮುಟ್ಟುಗೋಲ ಹಾಕಿಕೊಂಡಿದ್ದಾರೆ. ಅರ್ಫಾತ್ ಕಳೆದ ಎರಡು ತಿಂಗಳಲ್ಲಿ ಬೇರೆ ಬೇರೆ ಬ್ಯಾಂಕ್ ಖಾತೆಗಳಿಂದ 132 ಕೋಟಿ ರೂಪಾಯಿ ಹಣ ವಿತ್‌ಡ್ರಾ ಮಾಡಿಕೊಂಡಿದ್ದ ಎಂಬ ಅಚ್ಚರಿಯ ಮಾಹಿತಿ ತನಿಖೆಯಲ್ಲಿ ಬಹಿರಂಗವಾಗಿದೆ.

## ಬಂಧನದತ್ತ ತನಿಖೆ: ಬೈರತಿ ಬಸವರಾಜ್ ಪುಣೆಯಲ್ಲಿ ಅಡಗಿರುವ ಶಂಕೆ

**ಬೆಂಗಳೂರು:** ಹೈಕೋರ್ಟ್ ನಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಂಡ ಬೆನ್ನಲ್ಲೇ ಬೈರತಿ ಬಸವರಾಜ್ ತನ್ನ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು ನಾಪತ್ತೆಯಾಗಿದ್ದಾರೆ. ಆದ್ರೆ ಕೊನೆದ್ದಾಗಿ ಅವರ ಲೈವ್ ಲೊಕೆಷನ್ ಮಹಾರಾಷ್ಟ್ರದ ಪುಣೆಯಲ್ಲಿ ಪತ್ತೆಯಾಗಿದೆ ಎಂದು ತನಿಖಾ ಮೂಲಗಳು ತಿಳಿಸಿವೆ. ಬೆಳಗಾವಿಯ ಚಳಿಗಾಲದ ಅಧಿವೇಶನಕ್ಕೆ ಬೈರತಿ ಬಸವರಾಜ್, ಅಲ್ಲಿಂದಲೇ ನಾಪತ್ತೆಯಾಗಿದ್ದಾರೆ. ಸಿಐಡಿ ಅಧಿಕಾರಿಗಳ ತಂಡ ಬೈರತಿ ಬಸವರಾಜ್ ಉಳಿದುಕೊಂಡಿದ್ದ ಜಾಗಕ್ಕೆ ಹೋಗಿ ಅಲ್ಲಿನ ಸಿಸಿಟಿವಿ, ಯಾವ ರಸ್ತೆಯ ಮೂಲಕ ಯಾವ ಕಡೆಗೆ ಹೋಗಿದ್ದಾರೆ ಅನ್ನೋದು ಸೇರಿದಂತೆ ಬೇರೆ ಬೇರೆ ಜಿಲ್ಲೆ ಮತ್ತು ರಾಜ್ಯಕ್ಕೆ ಕನೆಕ್ಟ್ ಆಗುವ ಟೋಲ್‌ಗಳ ಸಿಸಿಟಿವಿ ದೃಶ್ಯಾವಳಿಗಳನ್ನ ಪರಿಶೀಲಿಸಿದ್ದಾರೆ.



ಈ ವೇಳೆ ಬೈರತಿ ಬಸವರಾಜ್ ಗೋವಾ ಅಥವಾ ಮಹಾರಾಷ್ಟ್ರಕ್ಕೆ ಹೋಗಿರುವ ಮಾಹಿತಿ ಸಿಕ್ಕಿತ್ತು. ತನಿಖೆ ಮುಂದುವರೆಸಿದ ಅಧಿಕಾರಿಗಳಿಗೆ ಬೈರತಿ ಬಸವರಾಜ್ ಲೊಕೆಷನ್ ಕೊನೆಯದ್ದಾಗಿ ಮಹಾರಾಷ್ಟ್ರದ ಪುಣೆಯಲ್ಲಿ ಪತ್ತೆ ಯಾಗಿದ್ದು ಅಲ್ಲಿಂದ ಮೊಬೈಲ್ ಆಫ್ ಮಾಡ್ಕೊಂಡು ನಾಪತ್ತೆಯಾಗಿದ್ದಾರೆ ಅನ್ನೋದು ಗೊತ್ತಾಗಿದೆ. ಬಿಕ್ಲು ಶಿವಪ್ರಕಾಶ್ ಕೊಲೆ ಆರೋಪಿಗಳು ನಂಗೆ ಪರಿಚಯನೇ ಇಲ್ಲ ಅಂದಿದ್ದ ಬೈರತಿ ಬಸವರಾಜ್‌ಗೆ ಈಗ ಸಂಕಷ್ಟ ಎದುರಾಗಿದೆ. ಸಿಐಡಿ ಅಧಿಕಾರಿಗಳ ತನಿಖೆಯಲ್ಲಿ ಆರೋಪಿಗಳ ಜೊತೆಗೆ ಬೈರತಿ ಬಸವರಾಜ್ ಸಂಪರ್ಕದಲ್ಲಿ ಇರೋದು ಪತ್ತೆಯಾಗಿದ್ದು, ಪೊಲೀಸರಿಗೆ ಸುಳ್ಳು ಮಾಹಿತಿ ನೀಡಿರೋದು ಗೊತ್ತಾಗಿದೆ. ಹಾಗಾಗಿ ಯಾವುದೇ ಕ್ಷಣದಲ್ಲೂ ಮಾಜಿ ಸಚಿವ ಬೈರತಿ ಬಸವರಾಜ್ ಬಂಧನವಾಗುವ ಸಾಧ್ಯತೆ ಇದೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812/988065534

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.